ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 84 RNI Number : KNKAN/25/A2770 03-04-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :84 ರಾಯಚೂರು 03-04-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ದೇಶದಲ್ಲೇ ಮೊದಲ ನಕ್ಸಲ್ ಮುಕ್ತ ರಾಜ್ಯ ಕರ್ನಾಟಕ

ಬೆಂಗಳೂರು,ಏ.2-

ಬಹಳ ವರ್ಷಗಳ ಹಿಂದೆಯೇ ಆ್ಯಂಟಿ ನಕ್ಸಲ್ ಫೋರ್ಸ್ ಸ್ಥಾಪಿಸುವ ಮೂಲಕ ದೇಶದಲ್ಲೇ ಮೊದಲು ಕರ್ನಾಟಕವನ್ನು ನಾವು ನಕ್ಸಲ್ ಮುಕ್ತ ರಾಜ್ಯವನ್ನಾಗಿ ಮಾಡಿದ್ದೇವೆ ಎಂದು ಗೃಹ ಸಚಿವರಾದ ಡಾ. ಜಿ.ಪರಮೇಶ್ವರ್ ಹೇಳಿದರು.

ಕೋರಮಂಗಲದ ಕೆಎಸ್ಆರ್‌ಪಿ ಪರೇಡ್ ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಹಾಗೂ ಮುಖ್ಯಮಂತ್ರಿಗಳ ಪದಕ ಪ್ರದಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಪದಕ ಪುರಸ್ಕೃತರನ್ನು ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಗೃಹಸಚಿವರು ದೇಶವನ್ನು ನಕ್ಸಲ್ ಮುಕ್ತ ಮಾಡಿದ್ದೇವೆ ಎಂದು ಹೇಳಿದ್ದಾರೆ. ಆದರೆ ಮೊದಲು ನಕ್ಸಲ್ ಮುಕ್ತ ರಾಜ್ಯ ಮಾಡಿದ್ದು ನಾವು ಎಂದರು.

ಕರ್ನಾಟಕ ಪೊಲೀಸ್ ಇಲಾಖೆ ದೇಶದಲ್ಲೇ ಅತ್ಯಂತ ಉತ್ತಮವಾದ ಪೊಲೀಸ್ ವ್ಯವಸ್ಥೆ ಎಂಬ ಬಿರುದಿಗೆ ಪಾತ್ರವಾಗಿದೆ. 1965ರ ಏ.2ರಂದು ಪೊಲೀಸ್ ಕಾಯ್ದೆಯನ್ನು ಜಾರಿಗೊಳಿಸುವ ಮೂಲಕ ರಾಜ್ಯ ಪೊಲೀಸರನ್ನು ಒಟ್ಟುಗೂಡಿಸಿ, ಶಿಸ್ತಿನಿಂದ ನಡೆಸುವ ಸಂದರ್ಭವನ್ನು ಪೊಲೀಸ್ ಧ್ವಜ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ಶಾಂತಿ, ನೆಮದಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಇಂಡಿಯಾ ಜಸ್ಟೀಸ್ ವರದಿ ಪ್ರಕಾರ ದೇಶದಲ್ಲಿ ನೊಂದವರಿಗೆ ನ್ಯಾಯ ನೀಡುವುದರಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿದೆ ಎಂಬುದು ಗೊತ್ತಾಗಿದೆ. ವಿಶೇಷವಾಗಿ ನ್ಯಾಯ ಒದಗಿಸುವುದರಲ್ಲಿ ಪೊಲೀಸ್ ಇಲಾಖೆ ಉತ್ತಮ ಕೆಲಸ ಮಾಡಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಕೇಂದ್ರ ಗೃಹ ಇಲಾಖೆಯು ರಾಯಚೂರು ಜಿಲ್ಲೆಯ ಕವಿತಾಳ ಪೊಲೀಸ್ ಠಾಣೆ ದೇಶದ 3ನೇ ಅತ್ಯುತ್ತಮ ಪೊಲೀಸ್ ಠಾಣೆ ಎಂದು ಗುರುತಿಸಿದೆ. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲ ಪೊಲೀಸ್ ಠಾಣೆಗಳು, ಕವಿತಾಳ ಪೊಲೀಸ್ ಠಾಣೆಯಂತೆಯೇ ಅತ್ಯುತ್ತಮ ಪೊಲೀಸ್ ಠಾಣೆಗಳಾಗಬೇಕೆಂದು ಸರ್ಕಾರ ಬಯಸುತ್ತದೆ ಎಂದರು.

ಪೊಲೀಸ್ ಇಲಾಖೆಯು ಪ್ರತಿನಿತ್ಯ ಸವಾಲುಗಳನ್ನು ಎದುರಿಸುತ್ತದೆ. ಸವಾಲುಗಳ ಮಧ್ಯೆ ಕಳೆದ ಮೂರು ವರ್ಷಗಳಿಂದ ನಮ ಸರ್ಕಾರ, ಮುಖ್ಯಮಂತ್ರಿಗಳ ನೇತೃತ್ವದಲ್ಲಿ ರಾಜ್ಯದಲ್ಲಿ ಶಾಂತಿ ಕಾಪಾಡುವುದರಲ್ಲಿ ಯಶಸ್ವಿಯಾಗಿದೆ. ರಾಜ್ಯಕ್ಕೆ ಬಂಡಾವಾಳ ಹೂಡಿಕೆಗೆ ಬರುವ ಜನ ಶಾಂತಿ-ನೆಮದಿ ಬಯಸುತ್ತಾರೆ. ರಾಜ್ಯದಲ್ಲಿ ಸೌಹಾರ್ದಯುತ ವಾತಾವರಣ ಸೃಷ್ಟಿ ಮಾಡುವುದರಲ್ಲಿ ಪೊಲೀಸ್ ಇಲಾಖೆ ಯಶಸ್ವಿಯಾಗಿದೆ ಎಂದು ಅವರು ಹೇಳಿದರು.

ಕರ್ತವ್ಯದ ವೇಳೆ ಇಲಾಖೆಗೆ ಚ್ಯುತಿ ಬಾರದಂತೆ ಅತ್ಯಂತ ಕ್ಷಿಪ್ರವಾಗಿ ಅಪರಾಧಗಳನ್ನು ಪತ್ತೆಹಚ್ಚುವುದನ್ನು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ತೋರಿಸಿಕೊಟ್ಟಿದ್ದಾರೆ. ಕಾರ್ಯದಕ್ಷತೆಗೆ, ಸಾಮರ್ಥ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸುತ್ತೇನೆ ಎಂದರು.

ರಾಜ್ಯದಲ್ಲಿ ಡ್ರಗ್ಸ್ ಜಾಲವನ್ನು ಸಂಪೂರ್ಣವಾಗಿ ಮಟ್ಟ ಹಾಕಲು ನಮ ಸರ್ಕಾರ ಮುಂದಾಗಿದ್ದು, ಡ್ರಗ್ಸ್ ಮುಕ್ತ ಕರ್ನಾಟಕ ಮಾಡುವುದಾಗಿ ಮುಖ್ಯಮಂತ್ರಿಗಳು ಘೋಷಣೆ ಮಾಡಿದ್ದಾರೆ. ಕಳೆದ ಮೂರು ವರ್ಷಗಳಲ್ಲಿ ಸಾವಿರಾರು ಕೋಟಿ ರೂ. ಮೌಲ್ಯದ ಮಾದಕ ದ್ರವ್ಯ ಪತ್ತೆಹಚ್ಚುವ ಮೂಲಕ ದಂಧೆಯಲ್ಲಿ ತೊಡಗಿದ ಅನೇಕ ಆರೋಪಿಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು.

ದೇಶದಲ್ಲಿ ಸೈಬರ್ ಕ್ರೈಂ ಹಾವಳಿ ಹೆಚ್ಚಾಗುತ್ತಿದೆ. ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಕರ್ನಾಟಕವೂ ಸೈಬರ್ ಕಮಾಂಡ್ ಯೂನಿಟ್ ಸ್ಥಾಪಿಸಿ, ಡಿಜಿ ಶ್ರೇಣಿಯ ಅಧಿಕಾರಿಯನ್ನು ನೇಮಿಸಿದೆ. ಸೈಬರ್ ಕಮಾಂಡ್ ಯೂನಿಟ್‌ಗೆ ಹೆಚ್ಚು ಪ್ರೋತ್ಸಾಹ ನೀಡುವ ಮೂಲಕ ಸೈಬರ್ ಅಪರಾಧಗಳನ್ನು ಕಡಿಮೆ ಮಾಡುವುದರಲ್ಲಿ ಯಶಸ್ವಿಯಾಗಿದ್ದೇವೆ ಎಂದು ತಿಳಿಸಿದರು.

ಆಧುನಿಕತೆ ಸವಾಲುಗಳನ್ನು ಎದುರಿಸಲು ಎಲ್ಲ ಹಂತದಲ್ಲಿಯೂ ತರಬೇತಿ ಪಡೆಯುವ ಮೂಲಕ ಕಾರ್ಯಕ್ಷಮತೆ ಹೆಚ್ಚಿಸಿಕೊಂಡು ಕೆಲಸ ಮಾಡಬೇಕಿದೆ ಎಂದು ಅವರು ಹೇಳಿದರು. ಪೊಲೀಸ್ ಇಲಾಖೆಯಲ್ಲಿ ವರ್ಗಾವಣೆ, ನೇಮಕಾತಿಯಲ್ಲಿ ಆಧುನಿಕತೆಯನ್ನು ಬಳಸಿಕೊಳ್ಳಲಾಗುವುದು.

8 ಸಾವಿರ ಕಾನ್‌ಸ್ಟೇಬಲ್, 600 ಪಿಎಸ್ಐ ಹುದ್ದೆ ನೇಮಕಾತಿಗೆ ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ಅನುವು ಮಾಡಿಕೊಟ್ಟಿದ್ದಾರೆ. ಶಾಶ್ವತವಾದ ಪೊಲೀಸ್ ಸಹಾಯ ಸೇವೆಗಳ ನೇಮಕಾತಿ ಮಂಡಳಿಯನ್ನು ಘೋಷಿಸಿದ್ದಾರೆ. ಮುಂದಿನ ದಿನಗಳಲ್ಲಿ ಪೊಲೀಸ್ ಇಲಾಖೆಯಲ್ಲಿ ಮತ್ತಷ್ಟು ಸುಧಾರಣೆಗಳನ್ನು ತರಲಾಗುವುದು ಎಂದು ಪರಮೇಶ್ವರ್ ತಿಳಿಸಿದರು.

ರಾಯಚೂರಿನಲ್ಲಿ ಪೊಲೀಸ್ ಧ್ವಜ ದಿನ ಆಚರಣೆ-2026

ಧ್ವಜವು ಶಿಸ್ತು, ಕರ್ತವ್ಯ ನಿಷ್ಠೆ, ಕಾನೂನು ಪಾಲನೆ, ರಕ್ಷಣೆಯ ಸಂಕೇತ: ಬಸವರಾಜ

ರಾಯಚೂರು,ಏ.02

ಪೊಲೀಸ್ ಇಲಾಖೆಯು ಗುರುವಾರ ರಾಯಚೂರು ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆ ಹಮ್ಮಿಕೊಂಡಿತ್ತು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ನಿವೃತ್ತ ಆರಕ್ಷಕ ಉಪ ನಿರೀಕ್ಷಕರಾದ ಬಸವರಾಜ ಅವರು ಮಾತನಾಡಿ, ಪೊಲೀಸರು ಎಲ್ಲಿ ಕರ್ತವ್ಯ ನಿರ್ವಹಿಸುತ್ತಾರೋ ಅಲ್ಲಿ ಧ್ವಜ ಇರುತ್ತದೆ. ಪೊಲೀಸ್ ಧ್ವಜದ ಗೌರವ ಎತ್ತಿ ಹಿಡಿಯುವುದು ಪೊಲೀಸರ ಕರ್ತವ್ಯ ಎಂದರು.

ಇದು ಪೊಲೀಸ್ ಇಲಾಖೆಗೆ ಮಹತ್ವದ ದಿನವಾಗಿದ್ದು, 1965ರ ಎಪ್ರಿಲ್ 2ರಂದು ಕರ್ನಾಟಕದಲ್ಲಿ ಪೊಲೀಸ್ ಪಡೆ ಅಧಿಕೃತವಾಗಿ ರಚನೆಯಾದ ನೆನಪಿಗಾಗಿ ಈ ದಿನವನ್ನು ಕರ್ನಾಟಕ ರಾಜ್ಯ ಎಲ್ಲಾ ಜಿಲ್ಲಾ ಕೇಂದ್ರದಲ್ಲಿ ಆಚರಣೆಯನ್ನು ಮಾಡುತ್ತಾ ಬಂದಿವೆ. ಈ ಧ್ವಜವು ಶಿಸ್ತು, ಕರ್ತವ್ಯ ನಿಷ್ಠೆ, ಕಾನೂನು ಪಾಲನೆ ಮತ್ತು ರಕ್ಷಣೆಯ ಸಂಕೇತವಾಗಿದೆ. ಸಮಾಜದಲ್ಲಿ ಸಾರ್ವಜನಿಕರು ಮತ್ತು ಪೊಲೀಸರ ನಡುವಿನ ಬಾಂಧವ್ಯವನ್ನು ಬೆಳೆಸಲು ಅತಿ ಮುಖ್ಯವಾಗಿದೆ. ಇದನ್ನು ಪ್ರತಿ ವರ್ಷ ಪೊಲೀಸ್ ಧ್ವಜ ಟಿಕೇಟ್‌ಗಳನ್ನು ಮಾರಾಟ ಮಾಡಿ ಅದರಿಂದ ಬರುವ ಹಣವನ್ನು ಪೊಲೀಸ್ ಕಲ್ಯಾಣ ನಿಧಿಗೆ ಜಮಾ ಮಾಡಲಾಗುತ್ತದೆ ಎಂದರು.



ನಾನು 1987ರ ಫೆಬ್ರುವರಿಯಲ್ಲಿ ಪೊಲೀಸ್ ಇಲಾಖೆಯಲ್ಲಿ ಪಿ.ಸಿ, ಎಚ್.ಸಿ, ಮತ್ತು ಎ.ಎಸ್.ಐ ಮತ್ತು ಪಿ.ಎಸ್.ಐ ಹುದ್ದೆಯಲ್ಲಿ ಹಲವು ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸಿ ದಿನಾಂಕ 28-02-2025 ರಂದು ಸಿಂಧನೂರು ನಗರ ಪೊಲೀಸ್ ಠಾಣೆಯಿಂದ ನಿವೃತ್ತಿ ಹೊಂದಿರುತ್ತೇನೆ ಎಂದರು.

ಪೊಲೀಸ ಕೆಲಸವೆಂದರೆ ಅಷ್ಟು ಸುಲಭದ ಕೆಲಸವಲ್ಲ. ಇದು ದೂರದ ಬೆಟ್ಟ ಕಣ್ಣಿಗೆ ನುಣ್ಣಗೆ ಅಂದಹಾಗೆ ದೂರದಿಂದ ನೋಡುವವರಿಗೆ ಚಂದ ಕಂಡರೂ, ಒಳಗಡೆ ಕಲ್ಲು, ಮುಳ್ಳು, ಕಷ್ಟ ಇದ್ದ ಹಾಗೇ ಕೆಲವು ತೊಂದರೆಗಳು ಇರುತ್ತವೆ. ಮತ್ತು ಬಿಸಿಲು, ಗಾಳಿ ಮಳೆ ಧೂಳು ಎನ್ನದೇ ಎಲ್ಲಾ ಸಂದರ್ಭದಲ್ಲಿ ಕರ್ತವ್ಯ ನಿರ್ವಹಿಸಬೇಕಾಗಿದೆ. ಸರಕಾರಿ ಹಾಗೂ ಸಾರ್ವತ್ರಿಕ ರಜೆ ಇದ್ದಾಗ ಉಳಿದವರಿಗೆ ಹಬ್ಬ, ಹರಿದಿನ ಜಾತ್ರೆ ಸಂಭ್ರಮಗಳನ್ನು ಆಚರಿಸುತ್ತಿದ್ದರೆ ಪೊಲೀಸರು ಮಾತ್ರ ಸಾರ್ವಜನಿಕರ ರಕ್ಷಣೆ ಸಲುವಾಗಿ ತಮ್ಮ ಕುಟುಂಬದ ಮನೆ ಬಿಟ್ಟು ಕರ್ತವ್ಯ ನಿರ್ವಹಿಸುತ್ತಾರೆ. ಹಾಗೂ ಕೆಲವು

3ನೇ ಪುಟಕ್ಕೆ

ದೇಶದ ಅಭಿವೃದ್ಧಿಗೆ ಜನಗಣತಿ ಅವಶ್ಯ: ಆಯುಕ್ತ ಜುಬಿನ್ ಮೊಹಪಾತ್ರ

ಕಲ್ಯಾಣ ಸಂಜೆ ಸುದ್ದಿ

ರಾಯಚೂರು,ಏ.02-

ಜನಗಣತಿ ದೇಶದ ಅಭಿವೃದ್ಧಿ, ಪ್ರಗತಿ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವ ಬುನಾದಿಯಾಗಿದ್ದು, ಸಮಗ್ರ ಯೋಜನೆ ರೂಪಿಸಲು ಅತ್ಯಂತ ಮುಖ್ಯವಾದ ಅಂಕಿ-ಅಂಶಗಳನ್ನು ಒದಗಿಸುತ್ತದೆ ಎಂದು ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ ಹೇಳಿದರು.

ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಬುಧವಾರ ಮಹಾನಗರ ಪಾಲಿಕೆಯಿಂದ ಆಯೋಜಿಸಿದ್ದ ಭಾರತದ ಜನಗಣತಿ 2027ರ ಅಂಗವಾಗಿ ಗಣತಿದಾರರು ಹಾಗೂ



ಮೇಲ್ವಿಚಾರಕರಿಗೆ ಮೊದಲ ಹಂತದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜನಗಣತಿ ಎಂಬುದು ಕೇವಲ ಸರ್ಕಾರದ ಕಾರ್ಯವಲ್ಲ; ಇದು ದೇಶದ ಸಮಗ್ರ ಅಭಿವೃದ್ಧಿಗೆ ಅಗತ್ಯವಾದ ಅಂಕಿ-ಅಂಶಗಳ ಸಂಗ್ರಹಣೆಯ ಪ್ರಮುಖ ಪ್ರಕ್ರಿಯೆಯಾಗಿದೆ. ಪ್ರಾಚೀನ ವೇದಗಳಲ್ಲಿಯೂ ಗಣತಿಯ ಉಲ್ಲೇಖವಿರುವುದು ಇದರ ಮಹತ್ವವನ್ನು ತೋರಿಸುತ್ತದೆ ಎಂದರು.

ಈ ಬಾರಿ ಜನಗಣತಿ ಸಂಪೂರ್ಣ ಡಿಜಿಟಲ್ ಮಾದರಿಯಲ್ಲಿ ನಡೆಯಲಿದ್ದು, ಸುಮಾರು 45 ದಿನಗಳ ಕಾಲ ಗಣತಿದಾರರು

3ನೇ ಪುಟಕ್ಕೆ

ಜನಗಣಿತಿ ಪ್ರಾರಂಭ ಸ್ವಯಂ ನೊಂದಣಿ ಮಾಡಿ - ಸಮಯ ಉಳಿಸಿ-ಸುರೇಶ ಶೇಟ್ಟಿ



ಸಿರವಾರ,ಏ.02-

2027 ರ ಜನಗಣತಿಯ ಮೊದಲ ಹಂತವಾಗಿ ಮನೆಗಳ ಪಟ್ಟಿ ಮತ್ತು ಮನೆ ಗಣತಿ(ಎಚ್ ಎಲ್ ಒ) ಕಾರ್ಯವನ್ನು ಎಪ್ರಿಲ್ 1 ರಿಂದ 15 ವರೆಗೆ 15 ದಿನಗಳ ಕಾಲ ನಡೆಸಲಾಗುವುದು, ಎಂದು ಸಿರವಾರ ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳು ಆದ ಸುರೇಶ ರವರು ತಿಳಿಸಿದ್ದಾರೆ. ಈ ಬಾರಿ ಜನಗಣತಿ ಎರಡು ಹಂತದಲ್ಲಿ ನಡೆಯಲಿದೆ. ಮೊದಲ ಹಂತದಲ್ಲಿ ಮನೆಗಳ ಪಟ್ಟಿ ಮತ್ತು ಮನೆ ಗಣತಿ ಕಾರ್ಯ ನಡೆಯಲಿದೆ.ಈ ಹಂತದಲ್ಲಿ ನಾಗಕರಿಗೆ ಸ್ವಯಂ-ಗಣತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಎಂದು ಹೇಳಿದ್ದಾರೆ. ಸ್ವಯಂ-ಗಣತಿ ಗಾಗಿ ಕೇಂದ್ರ ಸರ್ಕಾರದ ವೆಬ್ ಪೋರ್ಟಲ್ ಅನ್ನು ತೆರೆಯಲಾಗಿದ್ದು ಯಾವುದೇ ಒಂದು ಮನೆಯ ಸದ್ಯಸರು ಸುಮಾರು 15 ರಿಂದ 20 ನಿಮಿಷಗಳಲ್ಲಿ ತಮ್ಮ ಮನೆಯ ಸಂಪೂರ್ಣ ವಿವರಗಳನ್ನು ಭರ್ತಿ ಮಾಡಬಹುದು.ಗಣತಿ ಪೂರ್ಣಗೊಂಡ ನಂತರ ನಾಗಕರಿಗೆ ಸ್ವಯಂ ಗಣತಿ ಐಡಿ ನೀಡಲಾಗುವುದು ಹಾಗೂ ಈ ಐಡಿಯನ್ನು ಮೊಬೈಲ್ ಅಥವಾ ಇಮೇಲ್ ಮೂಲಕಪಡೆಯಬ ಹುದಾಗಿದೆ. ಗಣತಿದಾರರು ಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ ಈ ಐಡಿ ಹಂಚಿಕೊಳ್ಳಬಹುದು. ಇದರಿಂದ ಗಣತಿದಾರರು ಮಾಹಿತಿ ಪರಿಶೀಲನೆ ನಡೆಸಿ ಅಂತಿಮವಾಗಿ ದತ್ತಾಂಶ ಸಲ್ಲಿಕೆಯನ್ನು ಪೂರ್ಣಗೊ ಳಿಸಲಿದ್ದಾರೆ. ಈಗಾಗಲೇ ಎಪ್ರಿಲ್ 1 ರಿಂದ ಪ್ರಾರಂಭವಾಗಿದ್ದು ನಾಗರಿಕರು ನಿಮ್ಮ ಜನಗಣತಿ ವಿವರಗಳನ್ನು ಆನ್ ಲೈನ್ ನಲ್ಲಿ ವೇಗವಾಗಿ ಮತ್ತು ಸುರಕ್ಷಿತವಾಗಿ ಭರ್ತಿ ಮಾಡಿ ಸ್ವಯಂ-ಗಣತಿಯನ್ನು ಪೂರ್ಣ ಗೊಳಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಲಾಗಿದೆ ಎಂದು ತಿಳಿಸಿದ್ದಾರೆ.

ಜಗಜೀವನ್ ರಾಮ್ -ಅಂಬೇಡ್ಕರ್ ಜಯಂತಿ ಅದ್ದೂರಿಯಾಗಿ ಆಚರಣೆ -ಅಶೋಕ ಪವಾರ

ಸಿರವಾರ,ಏ.02-

ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ್ ರಾಂ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ ಜಯಂತಿಗಳನ್ನು ಒಟ್ಟಾಗಿ ಏ. 14 ರಂದು ಕಳೆದ ಬಾರಿಯಂತೆ ಈ ಬಾರಿಯೂ ಕೂಡ ತಾಲೂಕ ಆಡಳಿತದ ವತಿಯಿಂದ ವಿಜೃಂಭಣೆಯಿಂದ ಆಚರಣೆ ಮಾಡಲು ಸಕಲ ಸಿದ್ದತೆಗಳನ್ನು ಮಾಡಿಕೊಳ್ಳಿ ಎಂದು ತಹಸೀಲ್ದಾರ್ ಅಶೋಕ ಪವಾರ್ ರವರು ತಾಲೂಕ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಟ್ಟಣದ ತಹಸೀಲ್ದಾರ ಕಾರ್ಯಾಲ ಯದ ಸಭಾಂಗಣದಲ್ಲಿ



ಡಾ.ಬಾಬು ಜಗಜೀವನ್ ರಾಂ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ ಜಯಂತಿಗಳ ಆಚರಣೆಯ ಅಂಗವಾಗಿ ಬುಧವಾರ ಕರೆದಿದ್ದ ತಾಲೂಕ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಮುಖಂಡರುಗಳ ಪೂರ್ವ ಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಏಪ್ರೀಲ್ 05 ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ್ ರಾಂ ಜಯಂತಿ ಯಂದು ಕಛೇರಿಗಳಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಬಸ್ ನಿಲ್ದಾಣದ ಮುಂಭಾಗದಲ್ಲಿರುವ ನಾಮಪಲಕಕ್ಕೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡುವ ಮೂಲಕ ಸರಳವಾಗಿ ಆಚರಣೆ ಮಾಡೋಣ,

ಏ.14 ರಂದು ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನ್ ರಾಂ ರವರ ಜಯಂತಿಗಳನ್ನು ತಾಲೂಕ ಆಡಳಿತದ ವತಿಯಿಂದ ಜಂಟಿಯಾಗಿ ಆಚರಣೆ ಮಾಡಲು ನಿರ್ಧಾರ ಮಾಡಲಾಗಿದ್ದು, ಎಲ್ಲಾ ಸರ್ಕಾರಿ ಶಾಲೆ, ಕಾಲೇಜುಗಳಲ್ಲಿ ಕಛೇರಿಗಳಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಬೆಳಿಗ್ಗೆ 09 ಗಂಟೆಗೆ ಪಟ್ಟಣದ ಬಸವೇಶ್ವರ ವೃತ್ತದಿಂದ ಬಸ್ ನಿಲ್ದಾಣದ ವರೆಗೆ ಬೃಹತ್ ಮೆರವಣಿಗೆ ಮೂಲಕ ಆಗಮಿಸಿ ನಂತರ ವೇದಿಕೆ ಕಾರ್ಯಕ್ರಮ ಜರುಗಲಿದೆ, ವಿಶೇಷ ಉಪನ್ಯಾಸ ಕಾರ್ಯಕ್ರಮ,ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳನ್ನು ಪಡೆದ ವಿದ್ಯಾರ್ಥಿಗಳಿಗೆ, ಸಾಧಕರಿಗೆ ಸನ್ಮಾನ ಹಮ್ಮಿಕೊಳ್ಳಲಾಗಿದ್ದು,

3ನೇ ಪುಟಕ್ಕೆ

ಕಲ್ಲೂರು: 36ನೇ ಜಗದ್ಗುರು ಶ್ರೀ ಶಂಕರಾಚಾರ್ಯರ ಜಾತ್ರಾ ಮಹೋತ್ಸವ ಸಾಮೂಹಿಕ ವಿವಾಹ ಕಾರ್ಯಕ್ರಮ

ನವ ದಂಪತಿಗಳು ಆದರ್ಶ ಗುಣಗಳನ್ನು ಅಳವಡಿಸಿಕೊಳ್ಳಬೇಕು-ಸಚಿವ ಎನ್.ಎನ್ ಬೋಸರಾಜು





ಸಿರವಾರ,ಏ.02-

ನವ ದಂಪತಿಗಳು ಆದರ್ಶ ಗುಣಗಳನ್ನು ಅಳವಡಿಸಿಕೊಂಡು ಪರಸ್ಪರ ಹೊಂದಾಣಿಕೆಯಿಂದ ಜೀವನ ನಡೆಸಬೇಕು. ಪ್ರತಿಯೊಬ್ಬರೂ ತಮ್ಮ ಮಕ್ಕಳನ್ನು ಸಂಸ್ಕಾರಯುತವಾಗಿ ಬೆಳೆಸಬೇಕು ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಅವರು ಹೇಳಿದರು.

ತಾಲೂಕಿನ ಕಲ್ಲೂರು ಗ್ರಾಮದ ಶ್ರೀ ದತ್ತಾತ್ರೇ ಯ ಅವಧೂತ ಪೀಠ ಜಗದ್ಗುರು ಶ್ರೀಶಂಕ ರಾಚಾರ್ಯ ಮಠ ಕಲ್ಲೂರು ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಮತ್ತು ಜಗದ್ಗುರು ಶ್ರೀ ಶಂಕರಾಚಾರ್ಯರ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,

ಸಾಮೂಹಿಕ ವಿವಾಹದಲ್ಲಿ ಮದುವೆಯಾಗುವುದರಿಂದ ಆರ್ಥಿಕ ಹೊರೆ ತಡೆಯಬಹುದು. ಆರ್ಥಿಕವಾಗಿ ಸಂಕಷ್ಟ ಎದುರುಸುತ್ತಿರುವ ಕುಟುಂಬಗಳಿಗೆ ಸಾಮೂಹಿಕ ವಿವಾಹ ಸಹಕಾರಿಯಾಗಿವೆ ಎಂದರು.

ನೂತನ ನವ ಜೋಡಿಗಳ ಜೀವನ ಮುಂದಿನ ಭವಿಷ್ಯಕ್ಕೆ ಉಜ್ವಲವಾಗಲಿ ಆಯುಷ್ ಅರೋಗ್ಯ ಭಾಗ್ಯ ಕೊಟ್ಟು ಕಾಪಾಡಲಿ ಎಂದು ಶುಭ ಹಾರೈಸಿದರು. ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ನೂತನವಾಗಿ 13 ನವ ಜೋಡಿಗಳು ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

ಇಂದು ಸಂಜೆ 36 ನೇ ಜಗದ್ಗುರು ಶ್ರೀ ಶಂಕರಾಚಾರ್ಯರ ಜಾತ್ರಾ ಮಹೋತ್ಸವ ಅಂಗವಾಗಿ ರಥೋತ್ಸವ ನಡೆಯಲಿದೆ. ಇದೇ

3ನೇ ಪುಟಕ್ಕೆ

ಏಪ್ರಿಲ್ 4ರಂದು ಈದ್ ಸೌಹಾರ್ದ ಕೂಟ: ಭ್ರಾತೃತ್ವದ ಸಂದೇಶಕ್ಕೆ ವೇದಿಕೆ



ರಾಯಚೂರು,ಏ.02-

ನಗರದಲ್ಲಿ ಸಮುದಾಯಗಳ ನಡುವೆ ಸೌಹಾರ್ದತೆ ಮತ್ತು ಸಹಬಾಳ್ವೆಯನ್ನು ಬಲಪಡಿಸುವ ಉದ್ದೇಶದಿಂದ ಜಮಾಅತೆ ಇಸ್ಲಾಮಿ ಹಿಂದ್ ರಾಯಚೂರು ವತಿಯಿಂದ ಈದ್ ಸೌಹಾರ್ದ ಕೂಟವನ್ನು ಆಯೋಜಿಸಲಾಗಿದೆ. ಈ ಕುರಿತು ಇಂದು ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಸಂಘಟನೆಯ ಅಧ್ಯಕ್ಷ ಮುಹಮ್ಮದ್ ಆಸಿಮುದ್ದೀನ್ ಅಖ್ತರ್ ಮಾಹಿತಿ ನೀಡಿದರು.

ಅವರು ಮಾತನಾಡಿ, ಎಪ್ರಿಲ್ 4ರಂದು ಶನಿವಾರ ಸಂಜೆ 7:30ಕ್ಕೆ ನಗರದ ವೀರಶೈವ ಮಹಾಂತೇಶ ಕಲ್ಯಾಣ ಮಂಟಪದಲ್ಲಿ ಈದ್ ಸೌಹಾರ್ದ ಕೂಟ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ವಿವಿಧ ಧಾರ್ಮಿಕ, ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರಗಳ ಗಣ್ಯರು ಭಾಗವಹಿಸಿ ಸಮಾಜದಲ್ಲಿ ಏಕತೆ ಮತ್ತು ಭ್ರಾತೃತ್ವದ ಸಂದೇಶವನ್ನು ಸಾರಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಪ.ಬ್ರ. ಶ್ರೀ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು (ಕಿಲ್ಲೆ ಬೃಹನ್ಮಠ), ರೆವೆರೆಂಡ್ ಆರ್.

3ನೇ ಪುಟಕ್ಕೆ

ಕಲಬುರಗಿ:ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನ ರಾಮ್ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಜಯಂತಿ ವಿಜೃಂಭಣೆಯಿಂದ ಆಚರಣೆ: ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್



ಕಲಬುರಗಿ,ಏ.02-

ಹಸಿರು ಕ್ರಾಂತಿಯ ಹರಿಕಾರ ಹಾಗೂ ಮಾಜಿ ಉಪ ಪ್ರಧಾನಮಂತ್ರಿ, ಡಾ. ಬಾಬು ಜಗಜೀವನ ರಾಮ್ ಅವರ 119ನೇ ಜಯಂತಿ ಮತ್ತು ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ರವರ 135ನೇ ಜಯಂತಿಯನ್ನು ಜಿಲ್ಲೆಯಾದ್ಯಂತ ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಹನೀಯರ ಜಯಂತಿಯನ್ನು ಹಬ್ಬದ ರೀತಿಯಲ್ಲಿ ಸೌಹಾರ್ದಯುತವಾಗಿ ಆಚರಿಸುವ ಮೂಲಕ ಅವರ ಆದರ್ಶಗಳನ್ನು ಜನಸಾಮಾನ್ಯರಿಗೆ ತಲುಪಿಸುವುದು ಮುಖ್ಯ ಉದ್ದೇಶವಾಗಿರಬೇಕು ಎಂದು ಹೇಳಿದರು.

ಮಹಾನಗರ ಪಾಲಿಕೆಯ ಇಂದಿರಾ ಸ್ಮಾರಕ ಭವನ (ಟೌನ್ ಹಾಲ್)ನಲ್ಲಿ ಹಾಗೂ ನಗರದ ಜಗತ್ ವೃತ್ತದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ರವರ ಪ್ರತಿಮೆ ಎದುರು ಬೆಳಿಗ್ಗೆ 8.30 ಗಂಟೆಗೆ ಗೌರವಪೂರ್ವಕವಾಗಿ ಮಾಲಾರ್ಪಣೆ ಮಾಡಲಾಗುವುದು. ನಂತರ ನಗರದ ಪ್ರಮುಖ ಬೀದಿಗಳಲ್ಲಿ ಶಿಸ್ತುಬದ್ಧ ಮೆರವಣಿಗೆ ಆಯೋಜಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಜಯಂತಿ ಅಂಗವಾಗಿ ನಗರದ ಪ್ರಮುಖ ವೃತ್ತಗಳು, ಸಾರ್ವಜನಿಕ ಸ್ಥಳಗಳು ಹಾಗೂ ಮಹನೀಯರ ಪ್ರತಿಮೆಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡುವ ಜೊತೆಗೆ ವಿದ್ಯುತ್ ದೀಪಾಲಂಕಾರ ಮಾಡುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾ ಕೇಂದ್ರ ಸೇರಿದಂತೆ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮಗಳನ್ನು ಆಯೋಜಿಸಿ, ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ಜಯಂತಿ ಕೇವಲ ಮೆರವಣಿಗೆಗೆ ಸೀಮಿತವಾಗದೆ, ಯುವಜನತೆಗೆ ಮಹನೀಯರ ಆದರ್ಶಗಳು, ಸಂವಿಧಾನಾತ್ಮಕ ಮೌಲ್ಯಗಳು ಹಾಗೂ ಕೃಷಿ ಮತ್ತು ಆಡಳಿತ ಸುಧಾರಣೆಗಳ ಕುರಿತು ಅರಿವು ಮೂಡಿಸಬೇಕೆಂದರು. ಸಮುದಾಯ ಭವನಗಳ ಸುಣ್ಣ-ಬಣ್ಣ, ದುರಸ್ತಿ ಹಾಗೂ ವಿದ್ಯುತ್ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರಿಗೆ ನಿರ್ದೇಶನ ನೀಡಿದರು. ಶಾಲಾ-ಕಾಲೇಜುಗಳಲ್ಲಿ ಬೆಳಿಗ್ಗೆ 9 ಗಂಟೆಗೆ ಜಯಂತಿ ಆಚರಿಸಲು ಹಾಗೂ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಲು ಸೂಚಿಸಿದರು.

ಮೆರವಣಿಗೆಯ ಸಂದರ್ಭದಲ್ಲಿ ಆಸ್ಪತ್ರೆಗಳ ಮುಂಭಾಗ ಧ್ವನಿವರ್ಧಕಗಳ ಶಬ್ದವನ್ನು ಕಡಿಮೆ ಮಾಡುವುದರ ಜೊತೆಗೆ ಅಂಬುಲೆನ್ಸ್ ಸಂಚಾರಕ್ಕೆ ಯಾವುದೇ ಅಡ್ಡಿಯಾಗದಂತೆ ಕ್ರಮ ಕೈಗೊಳ್ಳಬೇಕು. ಮಹಿಳೆಯರ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಮಾತನಾಡಿ, ಕಾರ್ಯಕ್ರಮದ ವೇಳೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಹಾಗೂ ಸಂಚಾರ ವ್ಯವಸ್ಥೆಯಲ್ಲಿ ವ್ಯತ್ಯಯ ಉಂಟಾಗದಂತೆ ಪೊಲೀಸ್ ಇಲಾಖೆಯಿಂದ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

ಸಮುದಾಯದ ಮುಖಂಡರು ಮಾತನಾಡಿ, ಈ ಜಯಂತಿಗಳು ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾಗದೆ, ಸಮಾಜದ ಎಲ್ಲಾ ವರ್ಗದ ಜನರು ಒಗ್ಗೂಡಿ ಆಚರಿಸುವಂತಾಗಬೇಕು. ಶಾಂತಿ ಮತ್ತು ಶಿಸ್ತಿನಿಂದ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಎಲ್ಲಾ ಬಡಾವಣೆಗಳಿಂದ ಮೆರವಣಿಗೆ ಅಂಬೇಡ್ಕರ್ ವೃತ್ತದವರೆಗೆ ಸಾಗಲಿದ್ದು, ವಿವಿಧ ಕಲಾ ತಂಡಗಳು ಭಾಗವಹಿಸಲಿವೆ. ಕಾರ್ಯಕ್ರಮ ಶಾಂತಿಯುತವಾಗಿ ಹಾಗೂ ಸೌಹಾರ್ದಯುತವಾಗಿ ನಡೆಯಲು ಎಲ್ಲರೂ ಸಹಕರಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಡಿಸಿಪಿ ಪ್ರವೀಣ ನಾಯಕ್, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಡಿ.ಎಚ್.ಒ. ಡಾ. ಶರಣಬಸಪ್ಪ ಕ್ಯಾತನಾಳ, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸಂಗಮೇಶ, ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ರಾಜಶೇಖರ ಗೋನಾಯಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಭಾಗವಹಿಸಿದ್ದರು.



ಮಹಿಳಾ ಹಕ್ಕುಗಳಿಗಾಗಿ ಕಲಬುರಗಿಯಲ್ಲಿ ವಿವಿಧ ಸಂಘಟನೆಗಳಿಂದ ಬೃಹತ್ ಪ್ರತಿಭಟನೆ

ಕಲಬುರಗಿ,ಏ.02-

ಸಿಐಟಿಯು, ಕರ್ನಾಟಕ ಪ್ರಾಂತ ರೈತ ಸಂಘ, ಕೃಷಿ ಕೂಲಿಕಾರರ ಸಂಘ, ಜನವಾದಿ ಮಹಿಳಾ ಸಂಘಟನೆ, ಭಾರತ ವಿದ್ಯಾರ್ಥಿ ಫೆಡರೇಷನ್ ಹಾಗೂ ಡಿವೈಎಫ್ಐ ಜಿಲ್ಲಾ ಸಮಿತಿಗಳ ನೇತೃತ್ವದಲ್ಲಿ 118ನೇ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳೆಯರ ಹಕ್ಕುಗಳ ರಕ್ಷಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ನಗರದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ರ್ಯಾಲಿ ನಡೆಸಿದ ಸಂಘಟನೆಗಳ ಮುಖಂಡರು ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನಾಕಾರರು ಮಾತನಾಡಿ, ಸ್ವಾತಂತ್ರ್ಯ ಪಡೆದ ನಂತರವೂ ಸಮಾಜದಲ್ಲಿ ಲಿಂಗ ತಾರತಮ್ಯ ಇನ್ನೂ ಜೀವಂತವಾಗಿದ್ದು, ಸಮಾನ ಹಕ್ಕುಗಳಿಗಾಗಿ ಮಹಿಳೆಯರು ನಿರಂತರ ಹೋರಾಟ ನಡೆಸಬೇಕಾದ ಪರಿಸ್ಥಿತಿ ಇದೆ ಎಂದು ಹೇಳಿದರು. ಎಲ್ಲಾ ಕ್ಷೇತ್ರಗಳಲ್ಲಿ ದುಡಿಯುತ್ತಿರುವ ಮಹಿಳೆಯರಿಗೆ ಮಾತೃತ್ವ ರಜೆ ಹಾಗೂ ಮುಟ್ಟಿನ ರಜೆ ನೀಡಬೇಕು ಎಂದು ಆಗ್ರಹಿಸಿದರು.

ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯ ಜಿಲ್ಲಾಧ್ಯಕ್ಷೆ ಪದ್ಮನಿ ಕಿರಣಗಿ ಮಾತನಾಡಿ, ಮಹಿಳೆಯರ ಮೇಲೆ ಅತ್ಯಾಚಾರ, ದೌರ್ಜನ್ಯ ಮತ್ತು ಕೊಲೆ ಪ್ರಕರಣಗಳು ನಿರಂತರವಾಗಿ ನಡೆಯುತ್ತಿವೆ. ಇಂತಹ ಘಟನೆಗಳಿಗೆ ಕಡಿವಾಣ ಹಾಕುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು. ಅಫಜಲಪುರದ ಬಳೂರಗಿ ಗ್ರಾಮದ ಸಮೀಪ ನಡೆದ ಪತ್ನಿಹತ್ಯೆ ಘಟನೆ ಉಲ್ಲೇಖಿಸಿ, ಮಹಿಳೆಯರಿಗೆ ಭದ್ರತೆ ಇಲ್ಲದಂತಾಗಿದೆ ಎಂದು ಖೇದ ವ್ಯಕ್ತಪಡಿಸಿದರು.

ಡಿವೈಎಫ್ಐ ರಾಜ್ಯ ಘಟಕದ ಅಧ್ಯಕ್ಷೆ ಲವಿತ್ರ ವಸ್ತ್ರದ ಮಾತನಾಡಿ, ಸಾವಿತ್ರಿಬಾಯಿ ಫುಲೆ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಹೋರಾಟದ ಫಲವಾಗಿ ಮಹಿಳೆಯರು ಹಲವಾರು ಹಕ್ಕುಗಳನ್ನು ಪಡೆದಿದ್ದಾರೆ. ಆದರೆ, ಇಂದಿನ ಪರಿಸ್ಥಿತಿಯಲ್ಲಿ ಆ ಹಕ್ಕುಗಳನ್ನು ಉಳಿಸಿಕೊಳ್ಳಲು ಸಹ ಮತ್ತೆ ಹೋರಾಟ ನಡೆಸಬೇಕಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಸಿಐಟಿಯುನ ಶಾಂತಾ ಘಂಟಿ, ಅಂಗನವಾಡಿ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಗೌರಮ್ಮ ಪಾಟೀಲ, ಜಿಲ್ಲಾ ಕೃಷಿ ಕೂಲಿಕಾರರ ಸಂಘಟನೆಯ ಮಲ್ಲಮ್ಮ ಕೊಡ್ಲಿ, ಎಸ್ಎಫ್ಐ ಜಿಲ್ಲಾ ಕಾರ್ಯದರ್ಶಿ ಸುಜಾತಾ ವೈ., ಬಸಮ್ಮ ಗುತ್ತೇದಾರ, ಸಿಐಟಿಯು ಮುಖಂಡ ಎಂ.ಬಿ.ಸಜ್ಜನ್, ಶ್ರೀಮಂತ ಬಿರಾದಾರ, ಶಾಂತಾ ಸರಡಗಿ, ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಕಂಪ್ಲಿಯಲ್ಲಿ ಡಾ.ಶಿವಕುಮಾರ ಸ್ವಾಮೀಜಿಗಳ ಜಯಂತಿ ಸಂಭ್ರಮ

ಬಳ್ಳಾರಿ / ಕಂಪ್ಲಿ ,ಏ.02-

ಪಟ್ಟಣದ ಪೇಟೆ ಬಸವೇಶ್ವರ ದೇವಸ್ಥಾನ ಮುಂಭಾಗದಲ್ಲಿ ಶ್ರೀ ಪೇಟೆ ಬಸವೇಶ್ವರ ದೇವಸ್ಥಾನ ಸಮಿತಿ ಹಾಗೂ ದಿವಂಗತ ಸಜ್ಜನ್ ವೀರಭದ್ರಪ್ಪ ಕುಟುಂಬದ ನೇತೃತ್ವದಲ್ಲಿ ಪರಮಪೂಜ್ಯ ತ್ರಿವಿಧ ದಾಸೋಹಿ, ಕರ್ನಾಟಕ ರತ್ನ, ಪದ್ಮಭೂಷಣ ಡಾ.ಶಿವಕುಮಾರ ಮಹಾಸ್ವಾಮಿ ಅವರ 119ನೇ ಜಯಂತ್ಯೋತ್ಸವವನ್ನು ಬುಧವಾರ ಸಂಭ್ರಮದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ವೀರಶೈವ ಸಮಾಜದ ತಾಲೂಕು ಅಧ್ಯಕ್ಷ ಎಸ್.ಎಂ.ನಾಗರಾಜ ಮಾತನಾಡಿ, ಶ್ರೀಗಳು ವೈಯಕ್ತಿಕವಾಗಿ ಏನನ್ನೂ ಬಯಸದೆ ಸಮಾಜಕ್ಕಾಗಿ ಜೀವನವನ್ನು ಸಮರ್ಪಿಸಿಕೊಂಡು ದುಡಿದ ಮಹಾನ್ ವ್ಯಕ್ತಿ ಎಂದು ಕೊಂಡಾಡಿದರು.

ಶೈಕ್ಷಣಿಕ ಕ್ರಾಂತಿಯ ಮೂಲಕ ಲಕ್ಷಾಂತರ ಮಕ್ಕಳ ಬದುಕಿಗೆ ಬೆಳಕು ತಂದ ಶಿವಕುಮಾರ ಸ್ವಾಮೀಜಿಯವರ ಕಾಯಕ, ಶ್ರದ್ಧೆ ಹಾಗೂ ಸೇವಾಭಾವ ನಮ್ಮ ಬದುಕಿನ ದಾರಿಯಾಗಬೇಕು. ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಜಯಂತಿ ಆಚರಣೆಗೆ ನಿಜವಾದ ಅರ್ಥ ಸಿಗುತ್ತದೆ ಎಂದು ಹೇಳಿದರು.

ಮೊದಲಿಗೆ ಶಿವಕುಮಾರ ಸ್ವಾಮೀಜಿಯವರ ಭಾವಚಿತ್ರಕ್ಕೆ ವಿಶೇಷ ಪೂಜೆ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು. ಬಳಿಕ ಭಕ್ತರಿಗೆ ಸಿಹಿ ಹಾಗೂ ಮಜ್ಜಿಗೆ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿ ಅಧ್ಯಕ್ಷ ಡಿ.ವೀರಪ್ಪ, ಕಂಪ್ಲಿ ಜೆಸಿಐ ಅಧ್ಯಕ್ಷ ಡಾ.ಭರತ್ ಪದ್ಮಸಾಲಿ, ಮುಖಂಡರಾದ ಸಜ್ಜನ್ ಶರಣಪ್ಪ, ಸಜ್ಜನ್ ವಿಶ್ವನಾಥ, ಎಸ್.ಎಸ್.ಎಂ.ಚನ್ನಯ್ಯಸ್ವಾಮಿ, ವಾಲಿಕೊಟ್ರಪ್ಪ, ಜಿ.ಚಂದ್ರೇಶಖರಹಗೌಡ, ಬಿ.ವಿ.ಗೌಡ, ಎಸ್.ಎಂ.ಗುರುಪ್ರಸನ್ನ, ಅರವಿ ಅಮರೇಶಗೌಡ, ಗಡಾದ್ ಪ್ರಸಾದ್, ಇಂದ್ರಜಿತ್ ಸಿಂಗ್, ಸಂತೋಷ್, ರಾಕೇಶ ಬಾಗ್ರಾಚಾ ಸೇರಿದಂತೆ ಇತರರು ಇದ್ದರು.

ಆಶಾ ಕಾರ್ಯಕರ್ತೆಯರಿಗೆ ಬೇಸಿಗೆ ಮುಂಜಾಗ್ರತೆ ಮನನ ತರಬೇತಿ

ಬೇಸಿಗೆಯಲ್ಲಿ ಆರೋಗ್ಯ ರಕ್ಷಣೆಯ ಅರಿವು ಮೂಡಿಸಿ- ಶಿವಾನಂದ ಪೂಜಾರ

ಕೊಪ್ಪಳ,ಏ.02-

ಬೇಸಿಗೆ ಸಮಯದಲ್ಲಿ ಆರೋಗ್ಯ ರಕ್ಷಣೆಯ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ಕೊಪ್ಪಳ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ. ಪೂಜಾರ ಹೇಳಿದರು.

ಅವರು ಇತ್ತೀಚೆಗೆ ಗಂಗಾವತಿಯ ಸಮುದಾಯ ಭವನದಲ್ಲಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಗಂಗಾವತಿಯ ಅಂಬೇಡ್ಕರ್ ನಗರದಲ್ಲಿರುವ ನಗರ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಗಂಗಾವತಿ ನಗರ ಪ್ರದೇಶದ ಆಶಾ ಕಾರ್ಯಕರ್ತೆಯರಿಗೆ ಹಮ್ಮಿಕೊಂಡಿದ್ದ ಬೇಸಿಗೆ ಸಮಯದಲ್ಲಿ ಸಾರ್ವಜನಿಕರ ಆರೋಗ್ಯದ ಬಗ್ಗೆ ವಹಿಸಬೇಕಾದ ಮುಂಜಾಗ್ರತೆ ಕುರಿತು ಪುನರ್ ಮನನ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರತಿ ವರ್ಷ ಮಾರ್ಚ್ ತಿಂಗಳಿಂದ ಬೇಸಿಗೆ ಕಾಲ ಪ್ರಾರಂಭವಾಗುತ್ತಿದೆ. ಈ ಸಮಯದಲ್ಲಿ ಸಾರ್ವಜನಿಕರು ಆರೋಗ್ಯದ ಕುರಿತು ಹೆಚ್ಚಿನ ಗಮನ ಹರಿಸುವುದು ಅತ್ಯವಶ್ಯಕವಾಗಿದೆ. ಆಶಾ ಕಾರ್ಯಕರ್ತೆಯರು ಮನೆ-ಮನೆ ಭೇಟಿ ನೀಡಿದ ಸಂದರ್ಭದಲ್ಲಿ ಬಿಸಿಲಿನಿಂದ ವೃದ್ಧರು, ಮಕ್ಕಳು, ಗರ್ಭಿಣಿಯರು ಹಾಗೂ ಸಹವ್ಯಾಧಿಗಳು ಆರೋಗ್ಯದ ರಕ್ಷಣೆ ಪಡೆದುಕೊಳ್ಳಲು ಸಲಹೆ ನೀಡಬೇಕು. ಬೇಸಿಗೆ ಅವಧಿಯಲ್ಲಿ ಎಲ್ಲರೂ ಹೆಚ್ಚು ನೀರನ್ನು ಕುಡಿಯಬೇಕು. ಮಜ್ಜಿಗೆ ಅಥವಾ ಎಳನೀರು, ಹಣ್ಣಿನ ರಸವನ್ನು ಹೆಚ್ಚಾಗಿ ಸೇವಿಸಬಹುದು. ನೀರಿನ ಅಂಶ ಹೆಚ್ಚಾಗಿರುವ ತರಕಾರಿಗಳು ಅಥವಾ ಹಣ್ಣುಗಳನ್ನು ಸೇವಿಸುವುದು ಉತ್ತಮವಾಗಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ವಿಶೇಷ ಅರಿವು ಮೂಡಿಸಬೇಕು ಎಂದರು.



ಬೇಸಿಗೆ ಸಂದರ್ಭದಲ್ಲಿ ಸಾರ್ವಜನಿಕರು ಸಡಿಲವಾದ ತೆಳು ಬಣ್ಣದ ಹತ್ತಿಯ ಬಟ್ಟೆಯನ್ನು ಧರಿಸುವುದು ಸೂಕ್ತವಾಗಿದೆ. ಇದಲ್ಲದೇ ಗಾಳಿಯಾಡುವ ಪಾದರಕ್ಷೆ ಧರಿಸಿರಿ, ಹೊರಗಡೆ ತೆರಳುವ ವೇಳೆ ತಂಪು ಕನ್ನಡಕ, ಛತ್ರಿ, ಟವೆಲ್ ಅಥವಾ ಬಿಸಿಲಿನಿಂದ ಕಾಪಾಡಿಕೊಳ್ಳುವ ಸಾಮಾನ್ಯ ಕ್ರಮಗಳನ್ನು ಪಾಲಿಸುವುದು ಅತ್ಯವಶ್ಯಕವಾಗಿದೆ. ರೇಡಿಯೊ-ದೂರದರ್ಶನ ಹಾಗೂ ದಿನಪತ್ರಿಕೆಗಳಲ್ಲಿ ಬಿಸಿಯಾದ ಗಾಳಿ ಅಥವಾ ಶಾಖ ತರಂಗ (ಹೀಟ್ ವೇವ್)ದ ಬಗ್ಗೆ ನೀಡುವ ಮಾಹಿತಿ ಅನುಸಾರ ದೈನಂದಿನ ಚಟುವಟಿಕೆಗಳನ್ನು ಯೋಜಿಸಿಕೊಳ್ಳುವಂತೆ ಜನರಿಗೆ ತಿಳಿ ಹೇಳಿ. ಜಮೀನಕೆಲಸ, ರಸ್ತೆ ಕಾಮಗಾರಿ ಮತ್ತು ಮುಂತಾದ ಕೆಲಸಗಳು ಸೇರಿ ಬಿಸಿಲಿನಲ್ಲಿ ಹೊರಗಡೆ ಕಾರ್ಯನಿರ್ವಹಿಸುವವರು ಆದಷ್ಟು ಬೆಳಗ್ಗೆ 11 ಗಂಟೆಯೊಳಗೆ ಮತ್ತು ಸಂಜೆ 4 ಗಂಟೆ ನಂತರ ಕೆಲಸ ಕೈಗೊಳ್ಳುವುದು ಉತ್ತಮ. ಬೆಳಗ್ಗೆ 11 ರಿಂದ ಸಂಜೆ 4 ಗಂಟೆಯೊಳಗಿನ ಅವಧಿಯಲ್ಲಿ ಶ್ರಮದಾಯಕ ಕೆಲಸಗಳಿಂದ ವಿಶ್ರಾಂತಿ ಪಡೆಯುವುದು ಸೂಕ್ತ. ಹಾಗಾಗಿ ಈ ಬಗ್ಗೆ ಜನರಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಬಿಸಿಲಿನಲ್ಲಿ ನಡೆಯುವಾಗ ಕಡ್ಡಾಯವಾಗಿ ಚಪ್ಪಲಿ ಧರಿಸಬೇಕು. ಟೀ, ಕಾಫಿ, ಹೆಚ್ಚು ಸಕ್ಕರೆ ಅಂಶವನ್ನು ಹೊಂದಿರುವ ಕಾರ್ಬೋನೇಟೆಡ್ ಪಾನೀಯ ಹಾಗೂ ಮದ್ಯಪಾನದಿಂದ ದೂರವಿರುವುದು ಸೂಕ್ತವಾಗಿದೆ. ಯಾವುದೇ ವ್ಯಕ್ತಿ ತೊದಲು ಮಾತು ಅಥವಾ ಅರ್ಥ ರಹಿತವಾಗಿ ಬಡಬಡಿಸಿದಲ್ಲಿ ಅವರನ್ನು ಕೂಡಲೇ ನೆರಳಿನ ಸ್ಥಳಕ್ಕೆ ಸ್ಥಳಾಂತರಿಸಬೇಕು. ಬಿಸಿಗಾಳಿ ಮತ್ತು ಅತಿಯಾದ ತಾಪಮಾನದಿಂದ ಆರೋಗ್ಯ ಸಮಸ್ಯೆಗಳು ಉಂಟಾದಲ್ಲಿ ಸಮೀಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಿ ಅಥವಾ 108ಕ್ಕೆ ಕರೆ ಮಾಡುವ ಬಗ್ಗೆ ತಮ್ಮ ವ್ಯಾಪ್ತಿಯ ಸಾರ್ವಜನಿಕರಿಗೆ ವಿಶೇಷ ಜಾಗೃತಿ ಮೂಡಿಸಬೇಕು ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ರಮೇಶ್ ಅವರು ಹೆಚ್.ಪಿ.ವಿ ಲಸಿಕೆ, ಸಾಂಕ್ರಾಮಿಕ-ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ಮತ್ತು ಜಯಪ್ರಕಾಶ್ ಅವರು ಕುಷ್ಠರೋಗ ನಿರ್ಮೂಲನೆ ಕುರಿತು ಹಾಗೂ ಮಲ್ಲಿಕಾರ್ಜುನ್, ಎಸ್.ಟಿ.ಎಸ್ ಅವರು ಕ್ಷಯರೋಗ ನಿರ್ಮೂಲನೆ ಕುರಿತು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಹನುಮಂತವ್ವ, ಸುಮಿತ್ರಾ, ಎಸ್.ಟಿ.ಎಸ್ ಹುಸೇನಬಾಷಾ, ಲಿಂಕ್‌ವರ್ಕರ್ ಶಿವಪ್ರಸಾದ ಸೇರಿದಂತೆ ಆಶಾ ಕಾರ್ಯಕರ್ತೆಯರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸಕಾಲ ಸೇವೆ: ಜಿಲ್ಲಾವಾರು ಪ್ರಗತಿ ವರದಿ ಪ್ರಕಟ: ಬಳ್ಳಾರಿ ಜಿಲ್ಲೆಗೆ ಪ್ರಥಮ ಸ್ಥಾನ

ಬಳ್ಳಾರಿ,ಏ.02-

ರಾಜ್ಯ ಸರ್ಕಾರದ ಮಹತ್ವಾ ಕಾಂಕ್ಷೆಯ 'ಸಕಾಲ' ಯೋಜನೆಯ ಮಾರ್ಚ್ ತಿಂಗಳ ಜಿಲ್ಲಾವಾರು ಕಾರ್ಯಕ್ಷಮತೆಯ ವರದಿ ಬಿಡುಗಡೆಯಾಗಿದ್ದು, ಗಣಿನಾಡು ಬಳ್ಳಾರಿ ಜಿಲ್ಲೆಯು ರಾಜ್ಯದಲ್ಲೇ ಅತ್ಯುತ್ತಮ ಪ್ರಗತಿ ಸಾಧಿಸಿ ಮೊದಲ ಸ್ಥಾನ ಅಲಂಕರಿಸಿದೆ.

ಸಕಾಲದ ವಿವಿಧ ಮಾನದಂಡಗಳಾದ ಅರ್ಜಿ ವಿಲೇವಾರಿ, ವೇಗ, ನಿಗದಿತ ಅವಧಿಯೊಳಗಿನ ವಿಲೇವಾರಿ ಮತ್ತು ತಿರಸ್ಕೃತಗೊಂಡ ಅರ್ಜಿಗಳ ಪ್ರಮಾಣವನ್ನು ಆಧರಿಸಿ ಈ ಶ್ರೇಯಾಂಕ ನೀಡಲಾಗುತ್ತದೆ.

ಸಾರ್ವಜನಿಕರ ಅರ್ಜಿಗಳನ್ನು ನಿಗದಿತ ಕಾಲಮಿತಿಯೊಳಗೆ ವಿಲೇವಾರಿ ಮಾಡುವಲ್ಲಿ ಬಳ್ಳಾರಿ ಜಿಲ್ಲೆಯು ಮೇಲುಗೈ ಸಾಧಿಸಿದೆ. ಬಳ್ಳಾರಿ ಜಿಲ್ಲೆಯು ಶೇ.97.91 ರಷ್ಟು ಅರ್ಜಿಗಳನ್ನು ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡುವ ಮೂಲಕ ಗಮನಾರ್ಹ ಸಾಧನೆ ಮಾಡಿದೆ.

ಸಕಾಲ ಸೇವೆಯು ರಾಜ್ಯ ಸರ್ಕಾರದ ಒಂದು ಮಹತ್ವಾ ಕಾಂಕ್ಷೆಯ ಯೋಜನೆಯಾಗಿದ್ದು, ನಾಗರಿಕರಿಗೆ ನಿಗದಿತ ಅವಧಿಯೊಳಗೆ ಸರ್ಕಾರಿ ಸೇವೆಗಳನ್ನು ಒದಗಿಸುವ ಉದ್ದೇಶವನ್ನು ಹೊಂದಿದೆ. ಕರ್ನಾಟಕ ನಾಗರಿಕ ಸೇವೆಗಳ ಖಾತರಿ ಅಧಿನಿಯಮದಡಿ, ಜನಸಾ ಮಾನ್ಯರು ಸಲ್ಲಿಸುವ ಅರ್ಜಿಗಳಿಗೆ ಸರ್ಕಾರಿ ಕಚೇರಿಗಳು ವಿಳಂಬ ಮಾಡದೆ, ಕಾನೂನುಬದ್ಧವಾಗಿ ನಿಗದಿಪಡಿಸಿದ ಕಾಲಮಿತಿಯೊಳಗೆ ಸೇವೆ ನೀಡುವುದೇ 'ಸಕಾಲ'



ಸೇವೆಯಾಗಿದೆ.

ಕಂದಾಯ ಇಲಾಖೆಯ ಜಾತಿ, ಆದಾಯ ಮತ್ತು ವಾಸಸ್ಥಳ ದೃಢೀ ಕರಣ ಪತ್ರ. ಸಾರಿಗೆ ಇಲಾಖೆಯ ಚಾಲನಾ ಪರವಾನಗಿ, ವಾಹನ ನೋಂದಣಿ. ನಗರ- ಸ್ಥಳೀಯ ಸಂಸ್ಥೆಗಳಲ್ಲಿ ಜನನ ಮತ್ತು ಮರಣ ಪ್ರಮಾಣ ಪತ್ರ, ಖಾತಾ ಬದಲಾವಣೆ. ಪೊಲೀಸ್ ಇಲಾಖೆಯಲ್ಲಿನ ಪಾಸ್‌ಪೋರ್ಟ್ ಪರಿಶೀಲನೆ ಹಾಗೂ ಇತರೆ ಸೇರಿದಂತೆ 100 ಕ್ಕೂ ಹೆಚ್ಚು ಸೇವೆಗಳನ್ನು ಸಕಾಲದಲ್ಲಿ ಪಡೆಯಬಹುದಾಗಿದೆ.

ಟಾಪ್ 5 ಜಿಲ್ಲೆಗಳ ವಿವರ:

ಬಳ್ಳಾರಿ (ಮೊದಲ ಸ್ಥಾನ - 78.65 ಅಂಕ)

ಚಾಮರಾಜನಗರ (ಎರಡನೇ ಸ್ಥಾನ - 78.45 ಅಂಕ)

ಧಾರವಾಡ (ಮೂರನೇ ಸ್ಥಾನ - 78.38 ಅಂಕ)

ಕಲಬುರಗಿ (ನಾಲ್ಕನೇ ಸ್ಥಾನ - 78.27 ಅಂಕ)

ಹಾವೇರಿ (ಐದನೇ ಸ್ಥಾನ - 78.26 ಅಂಕ)

ಹೆಚ್ಚು ಜನಸಂಖ್ಯೆ ಮತ್ತು ಅರ್ಜಿಗಳ ಒತ್ತಡವಿರುವ ಬೆಂಗಳೂರು ನಗರ (32ನೇ ಸ್ಥಾನ) ಹಾಗೂ ಬೆಂಗಳೂರು ಗ್ರಾಮಾಂತರ (31ನೇ ಸ್ಥಾನ) ಜಿಲ್ಲೆಗಳು ಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲಿವೆ. ಬೆಂಗಳೂರು ನಗರದಲ್ಲಿ ಶೇ.11.19 ರಷ್ಟು ಅರ್ಜಿಗಳು ತಿರಸ್ಕೃತಗೊಂಡಿರುವುದು ಹಿನ್ನಡೆಗೆ ಕಾರಣವಾಗಿದೆ.

ರಾಜ್ಯಾದ್ಯಂತ ಮಾರ್ಚ್ ತಿಂಗಳಲ್ಲಿ ಲಕ್ಷಾಂತರ ಅರ್ಜಿಗಳು ಸಕಾಲ ಅಡಿಯಲ್ಲಿ ಸಲ್ಲಿಕೆಯಾಗಿದ್ದು, ಬೆಳಗಾವಿ (1,49,236) ಮತ್ತು ತುಮಕೂರು (1,19,794) ಜಿಲ್ಲೆಗ ಳಲ್ಲಿ ಅತಿ ಹೆಚ್ಚು ಸ್ವೀಕೃತಿ ದಾಖಲಾಗಿದೆ. ಆದರೆ ಕಾರ್ಯಕ್ಷಮತೆ ಆಧಾರದ ಮೇಲೆ ನಿಗದಿತ ಅವಧಿಯೊಳಗೆ ಅರ್ಜಿಗಳ ವಿಲೇವಾರಿಯಲ್ಲಿ ಬಳ್ಳಾರಿ ಜಿಲ್ಲೆಯು ಅಗ್ರಸ್ಥಾನ ಕಾಯ್ದುಕೊಂಡಿದೆ.

ಬಳ್ಳಾರಿ ಜಿಲ್ಲೆಯು ಸರ್ಕಾರಿ ಸಂಬಂಧಿತ ಸಾರ್ವಜನಿಕರ ಕೆಲಸಗಳನ್ನು ಕಾಲಮಿತಿಯೊಳಗೆ ಮಾಡಿಕೊಡುವಲ್ಲಿ ಯಶಸ್ವಿಯಾಗಿದ್ದು, ಇತರ ಜಿಲ್ಲೆಗಳಿಗೆ ಮಾದರಿಯಾಗಿದೆ. ಸರ್ಕಾರಿ ಸೇವೆಗಳನ್ನು ಜನರಿಗೆ ಸಕಾಲದಲ್ಲಿ ತಲುಪಿಸುವ ನಿಟ್ಟಿನಲ್ಲಿ ಈ ವರದಿಯು ಜಿಲ್ಲಾಡಳಿತದ ಕಾರ್ಯವೈಖರಿಗೆ ಹಿಡಿದ ಕೈಗನ್ನಡಿಯಾಗಿದೆ. ಈ ಸಂದರ್ಭದಲ್ಲಿ ಅಧಿಕಾರಿ-ಸಿಬ್ಬಂದಿಗೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಭಿನಂದನೆ ತಿಳಿಸಿದ್ದಾರೆ.

ಪತ್ರಕರ್ತರ ಸಮ್ಮೇಳನಕ್ಕೆ ಸಿಎಂ ಭಾಗಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಿ-ಸಚಿವ ಈಶ್ವರ್ ಬಿ. ಖಂಡ್ರೆ



ಬೀದರ,ಏ.02-

ಏಪ್ರಿಲ್ 11 ಹಾಗೂ 12 ರಂದು ನಗರದಲ್ಲಿ ಆಯೋಜಿಸಿರುವ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗಿಯಾಗಲಿದ್ದಾರೆ ಈ ಸಂದರ್ಭದಲ್ಲಿ ಯಾವುದೇ ಲೋಪವಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಹೇಳಿದರು.

ಅವರು ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ಕಛೇರಿ ಸಭಾಂಗಣದಲ್ಲಿ ಕರೆದ ಮುಖ್ಯಮಂತ್ರಿಯವರ ಬೀದರ್ ಭೇಟಿಯ ಪೂರ್ವಭಾವಿ ತಯಾರಿ, ಇಖಐಈಕ ಯೋಜನೆಯ ರೂ 50.00 ಕೋಟಿ ಕಾಮಗಾರಿಗಳ ಪ್ರಗತಿ ಪರಿಶೀಲನೆ, ಬೇಸಿಗೆ ಅವಧಿಯಲ್ಲಿ ಜಿಲ್ಲೆಯಲ್ಲಿ ಜನ-ಜಾನುವಾರು ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕಾಮಗಾರಿಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷ ವಹಿಸಿ ಮಾತನಾಡಿದರು.

ಸಿಎಂ ಭೇಟಿ ಸಂದರ್ಭದಲ್ಲಿ ಅವರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆ, ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ವಿವಿಧ ಸರ್ಕಾರಿ ಸೌಲಭ್ಯ ವಿತರಣೆ ಕಾರ್ಯಕ್ರಮ ಆಯೋಜನೆ ಮಾಡುವ ಚಿಂತನೆ ಇದೇ. ಅಂದುಕೊಂಡತೆ ಕಾರ್ಯಕ್ರಮ ಆಯೋಜನೆ ಮಾಡಿದಲ್ಲಿ ಎಲ್ಲರೂ ಸೇರಿ ಯಶಸ್ವಿಗೊಳಿಸಬೇಕೆಂದರು.

ಜಿಲ್ಲೆಯಲ್ಲಿ ಕೆಲವು ಕಡೆ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ದೂರುಗಳು ಬರುತ್ತಿವೆ. ದೂರು ಬಂದ 24 ಗಂಟೆಯಲ್ಲಿ ನೀರು ಒದಗಿಸಬೇಕು. ದೂರುಗಳ ನಿರ್ವಹಣೆಗಾಗಿ ಟಾಸ್ಕ್ ಫೋರ್ಸ್' ರಚಿಸಬೇಕು. ಜಿಲ್ಲೆಯಲ್ಲಿ ಅಕ್ರಮವಾಗಿ ಸಿಲಿಂಡರ್ ಮಾರುತ್ತಿರುವ ಕುರಿತು ಸಹ ದೂರುಗಳು ಬರುತ್ತಿವೆ ಅಂತಹವರ ವಿರುದ್ಧ ಕಠಿಣ ಕ್ರಮ ಜರಿಗಿಸಬೇಕೆಂದರು.

ಹುಲಸೂರಿನ ಬಲವಂತರಾಯ್ ಎನ್ನುವವರ ಪಟ್ಟಾ ಜಮೀನು ಸರ್ಕಾರಿ ಜಮೀನು ಎಂದಾಗಿದೆ ಎಂದು ಅವರು ದೂರು ನೀಡಿದ್ದಾರೆ ಕೂಡಲೇ ಅದನ್ನು ಸರಿಪಡಿಸಬೇಕು. ಕಬ್ಬಿನ ಬಿಲ್ಲು ಬಾಕಿ ಉಳಿಸಿಕೊಂಡಿರುವ ಕಂಪನಿಗಳಿಗೆ ನೋಟೀಸ್ ನೀಡಿ ಎಂದು ಸಚಿವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ದಿಲೀಪ್ ಬದೋಲೆ, ಮಹಾನಗರ ಪಾಲಿಕೆಯ ಆಯುಕ್ತರಾದ ಮುಕುಲ್ ಜೈನ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶೀಶ್ ರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಮತೆ ಇತರರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ರಾಯಚೂರಿನಲ್ಲಿ ಪೊಲೀಸ್ ಧ್ವಜ ದಿನ ಆಚರಣೆ-2026

ಧ್ವಜವು ಶಿಸ್ತು, ಕರ್ತವ್ಯ ನಿಷ್ಠೆ, ಕಾನೂನು ಪಾಲನೆ, ರಕ್ಷಣೆಯ ಸಂಕೇತ: ಬಸವರಾಜ

ಸಮಯದಲ್ಲಿ ನೀರು, ಊಟ, ನಿದ್ದೆ ಎನ್ನುವುದು ಸರಿಯಾದ ಸಮಯಕ್ಕೆ ಸಿಗುವುದಿಲ್ಲ. ಆದರೂ ಸಹ ಪೋಲೀಸರು ಎದೆಗುಂದದೇ ತಮ್ಮ ಕರ್ತವ್ಯ ನಿರ್ವಹಿಸುತ್ತಾರೆ.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕರ್ನಾಟಕ ರಾಜ್ಯ ಪೊಲೀಸ್ ಧ್ವಜ ದಿನಾಚರಣೆಯನ್ನು ಹಾಗೂ ನಿವೃತ್ತ ಪೊಲೀಸ್ ಅಧಿಕಾರಿಗಳ ಕಲ್ಯಾಣ ದಿನವನ್ನು ಪ್ರತಿ ವರ್ಷ ಏಪ್ರಿಲ್ 2 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಆಚರಿಸಲಾಗುತ್ತದೆ. ಪೊಲೀಸ್ ಇಲಾಖೆಯಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ದಿನದ 24 ಗಂಟೆಗಳ ಕಾಲ ವಿಶ್ರಾಂತಿವಿಲ್ಲದೇ ಕರ್ತವ್ಯ ನಿರ್ವಹಿಸಿ, ಸಾರ್ವಜನಿಕರ ಆಸ್ತಿ ರಕ್ಷಣೆ ಮತ್ತು ಕಾನೂನು ಸುವ್ಯವಸ್ಥೆಯಲ್ಲಿ ತೊಡಗಿರುವ ಅಂಶ ಎಲ್ಲರಿಗೂ ತಿಳಿದಿರುವ ವಿಷಯವಾಗಿದೆ ಎಂದರು.

2025-26ನೇ ಸಾಲಿನ ಸಾಲಿನಲ್ಲಿ ಆರೋಗ್ಯ ಭಾಗ್ಯ ಯೋಜನೆಡಿಯಲ್ಲಿ ಒಟ್ಟು 227 ಜನ ನಿವೃತ್ತ ಪೊಲೀಸ್ ಅಧಿಕಾರಿ, ಸಿಬ್ಬಂದಿಯವರಿಗೆ ವೈದ್ಯಕಿಯ ಚಿಕಿತ್ಸೆ ಯನ್ನು ಪಡೆದುಕೊಂಡಿದ್ದಾರೆ. 2025-26ನೇ ಸಾಲಿನಲ್ಲಿ ನಿವೃತ್ತ ಪೊಲೀಸ್ ಅಧಿಕಾರಿಗಳ ನಿಧಿಯಿಂದ 82 ಜನ ನಿವೃತ್ತ ಸಿಬ್ಬಂದಿಯವರಿಗೆ ವೈದ್ಯಕೀಯ ಚಿಕಿತ್ಸೆ ಗಾಗಿ ಒಟ್ಟು 9,13,812ರೂ.ಗಳನ್ನು ಪಾವತಿಸಲಾಗಿದೆ ಎಂದರು.

2025-26 ಸಾಲಿನಲ್ಲಿ ನಿವೃತ್ತ ಪೊಲೀಸ್ ಅಧಿಕಾರಿ ಸಿಬ್ಬಂದಿಗಳಿಗೆ ನಿವೃತ್ತ ಪೊಲೀಸ್ ಅಧಿಕಾರಿಗಳ ನಿಧಿಯಿಂದ 15 ಜನ ನಿವೃತ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳಿಗೆ ಶವ ಸಂಸ್ಕಾರಕ್ಕಾಗಿ ಒಟ್ಟು 1,50,000 ರೂ.ಗಳನ್ನು ಪಾವತಿಸಲಾಗಿದೆ ಎಂದರು.

ಸಿಬ್ಬಂದಿಯವರ ಉಪಯೋಗಕ್ಕಾಗಿ ಪೊಲೀಸ್ ಕಲ್ಯಾಣ ಮಂಟಪ, ಗ್ರಂಥಾಲಯ ಹಾಗೂ ಜಿಮ್‌ಗಳು, ಸಬ್ಸಿಡರಿ ಪೊಲೀಸ್ ಕ್ಯಾಂಟಿನ್ ಕೆಲಸ ಮಾಡುತ್ತಿವೆ. ಅಲ್ಲದೆ ಆರೋಗ್ಯ ಭಾಗ್ಯ ಯೋಜನೆಯಡಿಯಲ್ಲಿ ಅಧಿಕಾರಿ, ಸಿಬ್ಬಂದಿಗಳು ಹಾಗೂ ಅವರುಗಳ ಪತ್ನಿ, ಮಕ್ಕಳಿಗೆ ಹಾಗೂ ತಂದೆ ತಾಯಿಯವರು ಸೇರಿ ಸುಮಾರು 955 ಜನರನ್ನು ಆರೋಗ್ಯ ಭಾಗ್ಯ ಯೋಜನೆಯಡಿಯಲ್ಲಿ ಚಿಕಿತ್ಸೆ ಯ ಪ್ರಯೋಜನವನ್ನು ಪಡೆದುಕೊಂಡಿದ್ದಾರೆ ಎಂದರು.

ಕರ್ನಾಟಕ ರಾಜ್ಯ ಪೊಲೀಸ್ ಧ್ವಜ ದಿನಾಚರಣೆಯ ಅಂಗವಾಗಿ ಒಂದು ನಿಧಿಯನ್ನು ಮಾಡಿದ್ದು, ಈ ನಿಧಿಗಾಗಿ ಪೊಲೀಸ್ ಧ್ವಜಗಳನ್ನು ಮಾರಾಟ ಮಾಡಿ ಪೊಲೀಸ್ ಸಿಬ್ಬಂದಿಯವರಿಗೆ ಮತ್ತು ಸಾರ್ವಜನಿಕರಿಂದ ಹಣವನ್ನು ಸಂಗ್ರಹಿಸಲಾಗುವುದು. ಈ ಹಣವನ್ನು ನಿವೃತ್ತ ಪೊಲೀಸ್ ಅಧಿಕಾರಿಗಳ ಹಾಗೂ ಕರ್ತವ್ಯದಲ್ಲದ್ದ ಸಿಬ್ಬಂದಿಗಳ ಕಲ್ಯಾಣ ಕಾರ್ಯಕ್ರಮಗಳಿಗೆ ಉಪಯೋಗಿಸಲಾಗುತ್ತಿದ್ದು, ಎಲ್ಲರೂ ಈ ನಿಧಿಗೆ ಸಹಾಯ ಧನವನ್ನು ನೀಡಿ ಕಲ್ಯಾಣ ಕಾರ್ಯಕ್ರಮಗಳಿಗೆ ಸಹಕರಿಸಬೇಕೆಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಜಿ.ಹರೀಶ್, ಡಿವೈಎಸ್ಪಿ ಪ್ರಮಾನಂದ ಘೋರಕೆ, ದತ್ತಾತ್ರೇಯ ಕಾರ್ನಾಡ್, ಸಿಪಿಐಗಳಾದ ಸಾಬಯ್ಯ, ಸೋಮಶೇಖರ, ಹನುಮಂತ ನಾಯಕ, ಮಹಾದೇವ ಪಂಚಮುಖಿ, ಬಸವರಾಜ ತೇರಿ, ಈರೇಶ ನಾಯಕ, ಬಸಪ್ಪ ಬಿಳಿಗೇರಿ, ಅಮರೇಶ ಜಗರಕಲ್, ರಂಗನಾಥ ಕೋಟೆ, ಪಿಎಎಸ್‌ಐಗಳಾದ ತಿಮ್ಮಣ್ಣ ನಾಯಕ, ಹುಲಿಗೇಶ್, ಸಣ್ಣ ವಿರೇಶ್, ಸಿದ್ದಪ್ಪ, ಮಹಮ್ಮದ್ ಇಸಾಕ್, ಉದಯ ಕುಮಾರ್, ಬಾಹುಬಲಿ, ಶ್ರೀಕಾಂತ್, ಬೀರಣ್ಣ, ನಾರಾಯಣ ಸೇರಿದಂತೆ ಇತರರು ಇದ್ದರು.

ಕಾರ್ಯಕ್ರಮದಲ್ಲಿ ವಿವಿಧ ಪೊಲೀಸ ತುಕಡಿಗಳಿಂದ ಫಥ ಸಂಚಲನ, ರಾಷ್ಟ್ರ ಧ್ವಜ ಹಾಗೂ ಪೊಲೀಸ್ ಧ್ವಜದ ಆಗಮನ, ಮುಖ್ಯ ಅತಿಥಿಗಳಿಗೆ ಸನ್ಮಾನ ಮಾಡಲಾಯಿತು. ಅಚ್ಚುಕಟ್ಟಾಗಿ ಸಂಗೀತ ವಾದ್ಯವನ್ನು ಯಂಕಪ್ಪ ಅವರ ನೇತೃತ್ವದಲ್ಲಿ ನಿರ್ವಹಣೆ ಮಾಡಲಾಯಿತು. ಕಾರ್ಯಕ್ರಮ ನಿರೂಪಣೆಯನ್ನು ಮಲ್ಲಿಕಾರ್ಜುನ ಅವರು ನಿರ್ವಹಣೆ ಮಾಡಿದರು.

ದೇಶದ ಅಭಿವೃದ್ಧಿಗೆ ಜನಗಣತಿ ಅವಶ್ಯ: ಆಯುಕ್ತ ಜುಬಿನ್ ಮೊಹಪಾತ್ರ

ಮನೆಮನೆಗೆ ತೆರಳಿ ಕಟ್ಟಡಗಳು, ಕುಡಿಯುವ ನೀರಿನ ಸೌಲಭ್ಯ, ರಸ್ತೆ, ಕುಟುಂಬಗಳ ಜೀವನಮಟ್ಟ ಸೇರಿ ದಂತೆ ವಿವಿಧ ಮಾಹಿತಿಗಳನ್ನು ಸಂಗ್ರಹಿಸಲಿದ್ದಾರೆ. ಬಳಿಕ ಈ ಮಾಹಿತಿಯನ್ನು ಸಂಗ್ರಹಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುತ್ತದೆ ಎಂದು ತಿಳಿಸಿದರು.

ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ದೇಶದಲ್ಲಿ ಮೊದಲ ಜನಗಣತಿ 1872ರಲ್ಲಿ ನಡೆಯಿತು. ನಂತರ 1921ರಲ್ಲಿ ಮಾದರಿ ಗಣತಿ ಆರಂಭವಾಗಿ, 2021ರಲ್ಲಿ ಶತಮಾನ ಪೂರೈಸಿದೆ. ಇದೀಗ ನಡೆಯಲಿರುವ ಜನಗಣತಿ ಡಿಜಿಟಲ್ ರೂಪದಲ್ಲಿ ನಡೆಯುವುದು ವಿಶೇಷವಾಗಿದೆ ಎಂದು ಹೇಳಿದರು.

ಗಣತಿ ಕಾರ್ಯವು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಯಾವುದೇ ನಿರ್ಲಕ್ಷ್ಯವಿಲ್ಲದೆ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ಗಣತಿದಾರರು ಹಾಗೂ ಮೇಲ್ವಿಚಾರಕರಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪಾಲಿಕೆಯ ಉಪ ಆಯುಕ್ತ ಶರಣಪ್ಪ ಸತ್ಯಂಪೇಟ್, ಸದಸ್ಯ ಕಾರ್ಯದರ್ಶಿ ಕೃಷ್ಣಶಾವಂತಗೇರಿ, ವಲಯ ಆಯುಕ್ತ ಮಲ್ಲಿಕಾರ್ಜುನ, ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ಕಂದಾಯ ಅಧಿಕಾರಿ ರವಿ ಎಸ್. ಅಂಗಡಿ, ಶಂಶಾಲಂ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ದೇಶದ ಅಭಿವೃದ್ಧಿಗೆ ಜನಗಣತಿ ಅವಶ್ಯ: ಆಯುಕ್ತ ಜುಬಿನ್ ಮೊಹಪಾತ್ರ

ಕಾರ್ಯಕ್ರಮಕ್ಕೆ ಬರುವ ಎಲ್ಲರಿಗೂ ಊಟದ ವ್ಯವಸ್ಥೆಯೂ ಇರಲಿದೆ ಎಂದು ತಿಳಿಸಿದರು.

ಜಯಂತಿ ಆಚರಣೆ ನಿರ್ಲಕ್ಷ್ಯ ಮಾಡಿದ ಅದಿಕಾರಿಗಳಿಗೆ ನೇರ ಹೊಣೆಯಾಗುತ್ತಾರೆ

ಸಿರವಾರ ಪಟ್ಟಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನ್ ರಾಂ ರವರ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಲು ತಾಲೂಕ ಆಡಳಿತದಿಂದ ಅಗತ್ಯ ಕ್ರಮ ಕೈಗೊಳ್ಳಬೇಕು ಮತ್ತು ಪ್ರತಿ ತಿಂಗಳಿಗೊಮ್ಮೆ ಎಸ್ಸಿ -ಎಸ್ಟಿ ಸಮುದಾಯಗಳ ಕುಂದು ಕೊರತೆಯ ಸಭೆಯನ್ನು ನಡೆಸ ಬೇಕು ಎಂದು ಸಂಘ-ಸಂಸ್ಥೆಗಳ ಮುಖಂಡರು ತಹಸೀಲ್ದಾರರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪ.ಪಂ. ಅಧ್ಯಕ್ಷ ಹಾಜಿ ಚೌದ್ರಿ, ತಾ.ಪಂ. ಇಒ ಶಶಿಧರ್ ಸ್ವಾಮಿ, ಪ.ಪಂ. ಮುಖ್ಯಾಧಿಕಾರಿ ಸುರೇಶ ಶೆಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಸಹಾರ ಬಾನು, ಉಪ ಖಜಾನಾಧಿಕಾರಿ ಶಂಕ್ರಮ್ಮ, ನೀರಾವರಿ ಇಲಾಖೆ ಎಇಇ ವಿಜಯಲಕ್ಷ್ಮಿ ಪಾಟೀಲ್, ಜೆಸ್ಕಾಂ ಇಲಾಖೆಯ ಮೋಹನ್ ಸಿಂಗ್, ಸಿಡಿಪಿಒ ಇಲಾಖೆಯ ರೇಣುಕಾ, ಅರೋಗ್ಯ ಇಲಾಖೆಯ ಶ್ರೀದೇವಿ, ಶಿಕ್ಷಕ ಮಹೇಶ್ ಸಿರವಾರ, ಪಶು ಇಲಾಖೆಯ ವೆಂಕಟೇಶ್ ಕುಮಾರ್ ಹಾಗೂ ವಿವಿಧ ಸಂಘ-ಸಂಸ್ಥೆಗಳ ಮುಖಂಡರಾದ ಎಂ. ಬಸವರಾಜ ಭಂಡಾರಿ, ಲಂಕೇಶ್ ಮರಾಟ,

ಅಬ್ರಹಾಂ ಹೊನ್ನಟಗಿ, ಮನೋಹರ ಸಿರವಾರ, ಚನ್ನಪ್ಪ ಬೂದಿನಾಳ, ಡಿ.ಎಚ್. ಭೀಮಣ್ಣ, ಮೌನೇಶ್ ಪಿತಗಲ್, ಎಂ. ಡೇವಿಡ್, ಸೇರಿದಂತೆ ಕಂದಾಯ ಇಲಾ ಖೆಯ ಸಿಬ್ಬಂದಿಗಳು ಮತ್ತಿತರರು ಇದ್ದರು.

ಏಪ್ರಿಲ್ 4ರಂದು ಈದ್ ಸೌಹಾರ್ದ ಕೂಟ: ಭ್ರಾತೃತ್ವದ ಸಂದೇಶಕ್ಕೆ ವೇದಿಕೆ

ವೇಳೆ ಶ್ರೀಗಳ ತುಲಾಭಾರ ಸೇವೆ ನಡೆಯಿತು.

ನಾಳೆ ದತ್ತಾತ್ರೇಯ ಹಿರಿಯ ಪ್ರಾಥಮಿಕ ಶಾಲೆಯ ರಜತ ಮಹೋತ್ಸವ (ಬೆಳ್ಳಿ ಹಬ್ಬ) ನಡೆಯಲಿದೆ. ದಿ.4 ರಂದು ಕಲ್ಲು ಎತ್ತುವ ಸ್ಪರ್ಧೆ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮದಲ್ಲಿ ಶಿವರಾಮಕೃಷ್ಣ ನಂದ ಮಹಾಸ್ವಾಮಿಗಳು ಶಂಕರಾಚಾರ್ಯರ ಮಠ ಭಾಗ್ಯನಗರ ಕೊಪ್ಪಳ,ಜ್ಞಾನ ನಂದ ಮಹಾ ರಾಜರು ಶಿವಾನಂದ ಮಠ ಮಟಮಾರಿ, ದತ್ತಾತ್ರೇಯ ಅವಧೂತ ಪೀಠದ ಜಗದ್ಗುರು ಶಂಕರಾಚಾರ್ಯ ಮಠದ ಶಿವರಾಮಾನಂದ ಭಾರತಿ ಸ್ವಾಮೀಜಿ ಕಲ್ಲೂರು,ಬಿಳಿಯಾನ ಸಿದ್ದ ಮಹಾಸ್ವಾಮಿಗಳು ಯೋಗಿ ಸಿದ್ದೇಶ್ವರ ಆಶ್ರಮ ಜೋಕಾನಟ್ಟಿ,ಸ್ವರೂಪಾ ನಂದ ಮಹಾಸ್ವಾಮಿಗಳು,ಮಾರೆಪ್ಪ ಗುರು ಆರೋಲಿ,ವಿರೇಶ ತಾತ ದಿನ್ನಿ ದಿವ್ಯಾ ಸಾನಿಧ್ಯವಹಿಸಿದ್ದರು.

ಶ್ರೀ ಮಠದ ಅಭಿವೃದ್ದಿಗಾಗಿ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ಅವರು 5 ಲಕ್ಷ ರೂ ದೇಣಿಗೆ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ. ಹಂಪಯ್ಯ ನಾಯಕ, ಮಾಜಿ ಜಿ.ಪಂ ಸದಸ್ಯ ಬಶೀರ್ ಧಿನ್ ರಾಯಚೂರು,ಕೆ.ಭೀಮರೆಡ್ಡಿಪ್ಪಗೌಡ ಕಲ್ಲೂರು,ಎಂ.ಆರ್ ರಥಾನ್ ಲಾಲ್ ಬುಬೂ ಶೇತ್, ಸುರೇಶ ರೆಡ್ಡಿ,ಯರಗೇರಾ ಬೀಮಾಶಪ್ಪ ತಾತ, ಜಹಾಂಗೀರ್ ಪಾಷ ಸಾಹುಕಾರ ಕಲ್ಲೂರು, ಗ್ರಾ.ಪಂ ಅಧ್ಯಕ್ಷ ಸಂಗಪ್ಪಗೌಡ, ಉಪಾಧ್ಯಕ್ಷ ಸೋಮಶೇಖ ರರೆಡ್ಡಿ ನಾಯಕ ,ಶಂಕರ ಶೇಠ್ ಮುಂಬೈ, ಸಿಡಿಪಿಓ ಇಲಾಖೆ ಅಧಿಕಾರಿ ಶಿವಾಲಕ್ಷ್ಮೀ, ಕಮಲಬಾಯಿ, ರಾಜೇಶ್ವರಿ, ಕೋಲಿಮಿ ಹನುಮಣ್ಣ ಯಾದವ್ ಕಲ್ಲೂರು,ದೇವಣ್ಣ ಹೊಸೂರು, ಮುದುಕಪ್ಪ,ಕೃಷ್ಣ ಯಾದವ್, ಸುರೇಶ ರೆಡ್ಡಿ, ಜುಟ್ಲು ನರಸಪ್ಪ, ಧನಂಜಯ, ಸೋಮಣ್ಣ ಶಿಕ್ಷಕರು , ಶ್ರೀಧರ್ ಕಲ್ಯಾಣ,ವೆಂಕಟೇಶ್ ಶಿಕ್ಷಕರು, ಶಿವಪ್ಪ ನಾಯಕ ಕಲ್ಲೂರು, ಸೇರಿದಂತೆ ಗ್ರಾಮಸ್ಥರು ಭಕ್ತರು ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಪೋಷಕರು ಸರ್ಕಾರಿ ಶಾಲೆಗಳತ್ತ ಮುಖ ಮಾಡಲಿ : ದೇವಪ್ಪ ನಂದೂರಕರ್ ಕರೆ



ಚಿತ್ತಾಪುರ,ಏ.02-

ಸರ್ಕಾರಿ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಇಂದು ಖಾಸಗಿ ಶಾಲೆಗಳಿಗೆ ಸವಾಲು ಹಾಕುವಂತಿದ್ದು, ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹ ಬಿಟ್ಟು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸುವ ಮೂಲಕ ಅವುಗಳ ಬಲವರ್ಧನೆಗೆ ಮುಂದಾಗಬೇಕು ಎಂದು ನಿವೃತ್ತ ಶಿಕ್ಷಕ ದೇವಪ್ಪ ನಂದೂರಕರ್ ಕರೆ ನೀಡಿದರು.

ತಾಲೂಕಿನ ಹೊಸ್ಸೂರ್ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ 8ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಸರಸ್ವತಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಈ ವರ್ಷ ಕನಿಷ್ಠ 50ಕ್ಕೂ ಹೆಚ್ಚು ಹೊಸ ವಿದ್ಯಾರ್ಥಿಗಳನ್ನು ದಾಖಲಿಸುವ ಗುರಿ ಹೊಂದೋಣ ಎಂದು ಪೋಷಕರಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ 8ನೇ ತರಗತಿ ವಿದ್ಯಾರ್ಥಿಗಳು ಜ್ಞಾನದ ಸಂಕೇತವಾದ ದೀಪವನ್ನು 7ನೇ ತರಗತಿ ವಿದ್ಯಾರ್ಥಿಗಳಿಗೆ ಹಸ್ತಾಂತರಿಸುವ ಮೂಲಕ ಶೈಕ್ಷಣಿಕ ಪರಂಪರೆಯನ್ನು ಮುಂದುವರಿಸಿದರು. ಇದೇ ವೇಳೆ ಶಾಲೆಯಲ್ಲಿ ಸೇವೆ ಸಲ್ಲಿಸಿದ ಎಲ್‌ಎಲ್‌ಎಫ್ ಶಿಕ್ಷಕರಾದ ಫತ್ರುಬಿ ಮಂಜೂರಬಾಬಾ ಹಾಗೂ ಬುಗ್ಗಪ್ಪ ಭೀಮಣ್ಣ ಅವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು.

ಇದೇ ಶಾಲೆಯ ಹಳೆಯ ವಿದ್ಯಾರ್ಥಿಗಳಲ್ಲಿ ಪೊಲೀಸ್, ಶಿಕ್ಷಣ, ನ್ಯಾಯಾಂಗ, ಆರೋಗ್ಯ ಮತ್ತು ಮಾಧ್ಯಮ ಕ್ಷೇತ್ರಗಳಲ್ಲಿ ಉನ್ನತ ಹುದ್ದೆ ಅಲಂಕರಿಸಿರುವ 50ಕ್ಕೂ ಹೆಚ್ಚು ಸಾಧಕರನ್ನು ಮುಖ್ಯಗುರು ಜಗನ್ನಾಥ ಬಡಿಗೇರ ಅವರು ಸನ್ಮಾನಿಸಿದರು. ಅಮೀನಸಾಬ್ ಹವಾಲ್ದಾರ್, ಅಬ್ದುಲ್ ರಹಮಾನ್ ರುಸ್ತುಂ, ಮೈಬೂಬ ಹವಾಲ್ದಾರ್, ಮಲ್ಲಿಕಾರ್ಜುನ ಕಣಸೂರ ಸೇರಿದಂತೆ ಹಲವರು ಗೌರವ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ನಡೆದ ನೃತ್ಯ, ಕಿರುನಾಟಕ ಮತ್ತು ಅಭಿನಯ ಗೀತೆಗಳು ಎಲ್ಲರ ಗಮನ ಸೆಳೆಯುವಂತೆ ಮಾಡಿತು.

ಎಸ್‌ಡಿಎಂಸಿ ಅಧ್ಯಕ್ಷ ಸಂಜೀವ ರೆಡ್ಡಿ ಜಾಕನಳ್ಳಿ, ಈಶಣ್ಣ ಸಜ್ಜನ, ಭೀಮಣ್ಣ ಶೀಭಾ, ಗೌಸೋದೀನ್ ರುಸ್ತುಂ, ವಿಜಯಕುಮಾರ್ ಭಂಕಲಗಿ, ಸಿಆರ್‌ಪಿ ಶಿವಾನಂದ್ ಹಾಗೂ ಶಿಕ್ಷಕರು ಇದ್ದರು. ಶಿಲ್ಪಾ, ಮಲ್ಲು ಶೀಭಾ ನಿರೂಪಿಸಿದರು, ಭೀಮರಾಯ ವಂದಿಸಿದರು.



ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ನಿಮಿತ್ತ ಏ.10ರಿಂದ ಅರಿವು ಉತ್ಸವ: ಹನುಮಂತ ಇಟಗಿ

ಕಲಬುರಗಿ,ಏ.02-

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ನಗರದ ಹೀರಾಪುರ ಕ್ರಾಸ್ ಸಮೀಪ ಎ.10ರಿಂದ ಆರು ದಿನಗಳ ಕಾಲ ''ಅಂಬೇಡ್ಕರ್ ಅರಿವು ಉತ್ಸವ''ವನ್ನು ಆಯೋಜಿಸಲಾಗಿದೆ ಎಂದು ಜಯಂತ್ಯೋತ್ಸವ ಸಮಿತಿಯ ಜಿಲ್ಲಾಧ್ಯಕ್ಷ ಹನುಮಂತ ಇಟಗಿ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ಸವದ ಅವಧಿಯಲ್ಲಿ ಪ್ರತಿದಿನವೂ ವಿಶೇಷ ಉಪನ್ಯಾಸ ಕಾರ್ಯಕ್ರಮಗಳು ನಡೆಯಲಿದ್ದು, ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನಾಧಾರಿತ ನಾಟಕ ಪ್ರದರ್ಶನ, ಸಂಗೀತ ಕಾರ್ಯಕ್ರಮಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ ಅಭಿನಂದನಾ ಸಮಾರಂಭಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಇದೇ ವೇಳೆ ಏಪ್ರಿಲ್ 6ರಂದು ಡಾ. ಬಿ.ಆರ್. ಅಂಬೇಡ್ಕರ್, ಭಾರತದ ಸಂವಿಧಾನ ಹಾಗೂ ಜ್ಯೋತಿರಾವ್ ಫುಲೆ ಅವರ ಕುರಿತು ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಭಾಷಣ ಸ್ಪರ್ಧೆಗಳು ನಡೆಯಲಿವೆ.

ಅದೇ ರೀತಿ ಏಪ್ರಿಲ್ 12ರಂದು 135ಕ್ಕೂ ಹೆಚ್ಚು ಜನರಿಂದ ನೇತ್ರದಾನ ಕಾರ್ಯಕ್ರಮವೂ ನಡೆಯಲಿದೆ. ಜ್ಞಾನ ಪ್ರಕಾಶ್ ಸ್ವಾಮೀಜಿ, ಹ.ರಾ ಮಹೇಶ್, ಆರ್.ಡಿ. ಮಲ್ಲಯ್ಯ, ಕೋಟಿ ರಾಮಯ್ಯ, ಕವಿತಾ ರೆಡ್ಡಿ, ಅಪ್ಪಗೆರೆ ಸೋಮಶೇಖರ್ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಮುಖ್ಯ ಭಾಷಣ ಮಾಡಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅರವಿಂದ ಕಮಲಾಪುರ, ಡಾ.ಅನಿಲ್ ಟೆಂಗಳಿ, ಅಲ್ಲಮಪ್ರಭು ನಿಂಬರ್ಗಾ, ಸಲೀಮ್ ಶೇಖ್, ಮಹೇಶ್ ತೆಲ್ಲೂರು, ದಶರಥ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಏ. 4 ರಂದು ಸಿಂಧನೂರಿನಲ್ಲಿ ಸೈನಿಕ ಶಾಲೆ ಉದ್ಘಾಟನೆ

ಸಿಂಧನೂರು,ಏ.02-

ಏಪ್ರಿಲ್ 1. ಸಿಂಧನೂರು ನಗರದ ಶ್ರೀ ಕೃಷ್ಣ ದೇವರಾಯ ಶಾಲೆಯಲ್ಲಿ ಸೈನಿಕ ಶಾಲೆ ಅಧಿಕೃತವಾಗಿ. ಏಪ್ರಿಲ್ ನಾಲ್ಕರಂದು ಉದ್ಘಾಟನೆ ಯಾಗಲಿದೆ ಎಂದು ಶ್ರೀ ಕೃಷ್ಣದೇವರಾಯ ಸೊಸೈಟಿ.ಅಧ್ಯಕ್ಷರಾದ ವೆಂಕಟರಾವ್ ತಿಳಿಸಿದರು. ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು. ಸೈನಿಕ ಶಾಲೆ ಉದ್ಘಾಟನಾ ಕಾರ್ಯಕ್ರಮಕ್ಕೆ. ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಕೇಂದ್ರ ಸಚಿವರಾದ. ಶ್ರೀ ಎಚ್ ಡಿ. ಕುಮಾರಸ್ವಾಮಿ . ಕೇಂದ್ರ ರಕ್ಷಣಾ ವಿಭಾಗದ ರಾಜ್ಯ ಸಚಿವ. ಸಂಜಯ್ ಶೇಠ. ಸಚಿವರಾದ. ನಾರಾ ಲೋಕೇಶ್ . ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ತಂಗಡಗಿ. ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಪ್ರಕಾಶ್ ಪಾಟೀಲ್. ಸಣ್ಣ ನೀರಾವರಿ ಮಂತ್ರಿಗಳಾದ. ಶ್ರೀ ಎನ್ ಎಸ್ ಬೋಸರಾಜು. ರಾಯಚೂರು ಹಾಗೂ ಕೊಪ್ಪಳದ ಸಂಸದರು. ಮತ್ತು ಸ್ಥಳೀಯ ಶಾಸಕರು. ಹಾಗೂ ಅಕ್ಕ ಪಕ್ಕದ ಜಿಲ್ಲೆಯ ಶಾಸಕರು. ಈ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಪ್ರಸಕ್ತ ಸಾಲಿನಲ್ಲಿ. 30 ವಿದ್ಯಾರ್ಥಿನಿಯರು. 90 ವಿದ್ಯಾರ್ಥಿಗಳು. ಸೇರಿ ಒಟ್ಟು 120 ವಿದ್ಯಾರ್ಥಿಗಳು ದಾಖಲಾತಿ ಪಡೆಯಲಿದ್ದಾರೆ. ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ. ಶ್ರೀ ಎನ್ ಟಿ ರಾಮರಾವ್ ಅವರ ಮೂರ್ತಿ. ಹಾಗೂ ಬಸವಣ್ಣನವರ ಮೂರ್ತಿ. ಕಾಲೇಜು ಕ್ಯಾಂಪಸ್ ನಲ್ಲಿ. ಉದ್ಘಾಟಿಸಲಿದ್ದಾರೆ. ಬೈಕ್ ರ‍್ಯಾಲಿ ಮುಖಾಂತರ. ಅತಿಥಿಗಳಿಗೆ ಸ್ವಾಗತಿಸುವಲಾಗುವುದು ಎಂದು ಮಾಹಿತಿ ನೀಡಿದರು. ಈ ಪತ್ರಿಕಾಗೋಷ್ಠಿಯ ಸಂದರ್ಭದಲ್ಲಿ. ಚಿಟ್ಟೂರಿ ಶ್ರೀನಿವಾಸ್. ಕೆ ಸುಬ್ಬರಾವ್. ನಾಗೇಶ್ ನಂದಿನಿ. ಜಿ ಎಸ್ ಸತ್ಯನಾರಾಯಣ. ಕಮ್ಮವಾರಿ ಬಿ ಹರ್ಷ. ವೆಂಕಟೇಶ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

ಜನಗಣತಿ ಕಾರ್ಯ ನಿಖರವಾಗಿ ನೆರವೇರಿಸಿ : ಡಿಸಿ ಕವಿತಾ ಮನ್ನಿಕೇರಿ ಸೂಚನೆ



ವಿಜಯನಗರ , ಏ.02-

ಮುಂಬರುವ ಜನಗಣತಿ ಕಾರ್ಯವನ್ನು ನಿಖರ ಹಾಗೂ ಸ್ಪಷ್ಟ ಮಾಹಿತಿಯೊಂದಿಗೆ ವ್ಯವಸ್ಥಿತವಾಗಿ ದತ್ತಾಂಶ ಸಂಗ್ರಹಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

ನಗರದ ಪಿ.ಡಿ.ಐ.ಟಿ ಕಾಲೇಜಿನಲ್ಲಿ ಗಣತಿದಾರರು ಹಾಗೂ ಮೇಲ್ವಿಚಾರಕರಿಗೆ ಆಯೋಜಿಸಿದ್ದ ಮೂರು ದಿನಗಳ ತರಬೇತಿ ಮತ್ತು ಮಾರ್ಗದರ್ಶನ ಕಾರ್ಯಕ್ರಮವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಬಾರಿ ಗಣತಿ ಸಂಪೂರ್ಣ ಡಿಜಿಟಲ್ ರೂಪದಲ್ಲಿ ನಡೆಯುತ್ತಿರುವುದರಿಂದ, ಗಣತಿದಾರರು ಮೊಬೈಲ್ ಆಪ್ ಅನ್ನು ಸಮರ್ಪಕವಾಗಿ ಬಳಸಬೇಕು. ತಾಂತ್ರಿಕ ತೊಂದರೆಗಳು ಎದುರಾದಲ್ಲಿ ತಕ್ಷಣ ಪರಿಹಾರ ಕಂಡುಕೊಳ್ಳಬೇಕು ಎಂದು ಸೂಚಿಸಿದರು.

ಜನಗಣತಿ ಕಾರ್ಯವನ್ನು ಎರಡು ಹಂತಗಳಲ್ಲಿ ನಡೆಸಲಾಗುತ್ತಿದ್ದು, ಪ್ರಾರಂಭದ 15 ದಿನಗಳ ಕಾಲ ಸ್ವಯಂ ಘೋಷಣೆಗೆ ಅವಕಾಶ ಕಲ್ಪಿಸಲಾಗಿದೆ. ಬಳಿಕ ಮನೆಮನೆಗೆ ಭೇಟಿ ನೀಡಿ ಸಂಗ್ರಹಿಸುವ ಮಾಹಿತಿ ಶೇ.100ರಷ್ಟು ನಿಖರವಾಗಿರಬೇಕು. ಯಾವುದೇ ಮಾಹಿತಿಯನ್ನು ಅಂದಾಜಿನ ಮೇಲೆ ದಾಖಲಿಸಬಾರದು ಎಂದು ಎಚ್ಚರಿಸಿದರು.

ಈ ಗಣತಿ ಕಾರ್ಯಕ್ಕಾಗಿ 27 ಚಾರ್ಜ್ ಅಧಿಕಾರಿಗಳು, 44 ಫೀಲ್ಡ್ ತರಬೇತುದಾರರು, 16 ತಾಂತ್ರಿಕ ಸಹಾಯಕರು, 499 ಮೇಲ್ವಿಚಾರಕರು ಹಾಗೂ 2847 ಗಣತಿದಾರರನ್ನು ನೇಮಕ ಮಾಡಲಾಗಿದೆ. ಒಟ್ಟು 2467 ಹೌಸ್ ಲಿಸ್ಟಿಂಗ್ ಬ್ಲಾಕ್‌ಗಳನ್ನು ಗುರುತಿಸಲಾಗಿದ್ದು, ಪ್ರತಿಯೊಬ್ಬ ಗಣತಿದಾರರಿಗೆ 250 ಮನೆಗಳ ಜವಾಬ್ದಾರಿ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಜನಗಣತಿ ದೇಶದ ಭವಿಷ್ಯದ ಜನಕಲ್ಯಾಣ ಯೋಜನೆಗಳಿಗೆ ಬುನಾದಿಯಾಗಿರುವುದರಿಂದ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದೆ ಕಾರ್ಯನಿರ್ವಹಿಸಬೇಕು. ಪ್ರತಿದಿನದ ಪ್ರಗತಿಯನ್ನು ಪೋರ್ಟಲ್‌ನಲ್ಲಿ ದಾಖಲಿಸಬೇಕು ಹಾಗೂ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ಹೇಳಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮುಹಮ್ಮದ್ ಅಲಿ ಅಕ್ರಂ ಷಾ, ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಜನಗಣತಿ ಜಾಥಾಕ್ಕೆ ಚಾಲನೆ:

ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ನಡೆದ 16ನೇ ಜನಗಣತಿ ಜಾಥಾಕ್ಕೆ ಡಿಸಿ ಕವಿತಾ ಮನ್ನಿಕೇರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮಹಮ್ಮದ್ ಅಲಿ ಅಕ್ರಂ ಷಾ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ವಿವಿಧ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದರು.

ನಾಳೆ ಸಮ್ ಟ್ಯಾಲೆಂಟ್ ಆವಾರ್ಡ್ ಸ್ಪರ್ಧೆ: ವಿನಯಕುಮಾರ್



ಲಿಂಗಸುಗೂರು,ಏ.02-

2025-26 ನೇ ಸಾಲಿನಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷೆ ಬರೆದ ವಿದ್ಯಾರ್ಥಿಗಳಿಗೆ ಏಪ್ರಿಲ್ 03 ರ ಶುಕ್ರವಾರದಂದು ಶ್ರೀ ಉಮಾ ಮಹೇಶ್ವರಿ ಸಮೂಹ ಶಿಕ್ಷಣ ಸಂಸ್ಥೆಯ ವತಿಯಿಂದ ಸಮ್ ಟ್ಯಾಲೆಂಟ್ ಅವಾರ್ಡ್-2026 ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ವಿನಯಕುಮಾರ್ ಗಣಾಚಾರಿ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಳೆದ 10 ವರ್ಷಗಳಿಂದ ಟ್ಯಾಲೆಂಟ್ ಆವಾರ್ಡ್ ಸ್ಪರ್ಧೆ ಆಯೋಜಿಸಲಾಗುತ್ತಿದ್ದು, ಈ ವರ್ಷವು 25 ಲಕ್ಷ ಮೊತ್ತದ ವಿದ್ಯಾರ್ಥಿ ವೇತನವನ್ನು ನೀಡಲಾಗುವುದು. ಈ ಸ್ಪರ್ಧೆಯಲ್ಲಿ ರಾಂಕ್ ಪಡೆದ 5 ವಿದ್ಯಾರ್ಥಿಗಳಿಗೆ ಪಿಯುಸಿ ವಿಜ್ಞಾನ ವಿಭಾಗಕ್ಕೆ ಎರಡು ವರ್ಷದ ಶಿಕ್ಷಣವನ್ನು ಉಚಿತವಾಗಿ ನೀಡಲಾಗುವುದು.

6 ರಿಂದ 10 ರ್ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಪ್ರಥಮ ವರ್ಷ ಉಚಿತ ಶಿಕ್ಷಣವನ್ನು ನೀಡಲಾಗುವುದು.10 ರಿಂದ 20 ರ್ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ವಿಜ್ಞಾನ ವಿಭಾಗಕ್ಕೆ ಶೇಕಡ 50 ರಷ್ಟು ರಿಯಾಯಿತಿ ನೀಡಲಾಗುತ್ತಿದೆ. ಜಿಲ್ಲೆಯ ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು.

ಹೆಚ್ಚಿನ ಮಾಹಿತಿಗಾಗಿ ಈ ನಂಬರನ್ನು ಸಂಪರ್ಕಿಸಿ, 9611556417, 8197593926, 8904076146, 9880340882 ನಂಬರ್‌ಗಳನ್ನು ಸಂಪರ್ಕಿಲು ಕೋರಲಾಗಿದೆ.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ಜಿ.ವಿ.ಸುರೇಶ, ಸಹ ಆಡಳಿತಾಧಿಕಾರಿ ಅಮರೇಶ ಸ್ವಾಮಿ ತೋರಣದಿನ್ನಿ, ಪದವಿ ಕಾಲೇಜಿನ ಪ್ರಾಚಾರ್ಯ ವಿರೇಶ ಆದೋನಿ, ಸಂಗಯ್ಯ ಸಿಂದಗಿಮಠ, ಶಂಕ್ರಪ್ಪ ಕನ್ನಾಳ, ಚನ್ನಬಸವ ಸ್ವಾಮಿ, ಯಮನೂರಪ್ಪ, ಜೀವನ್, ಸೇರಿ ಇತರರು ಇದ್ದರು.

ಉಪ ಚುನಾವಣೆ: ಕಾಂಗ್ರೆಸ್ ಅಭ್ಯರ್ಥಿ ಮೇಟಿ ಪರ ಬಯ್ಯಾಪುರ ಮತಯಾಚನೆ


ಲಿಂಗಸುಗೂರು,ಏ.02-

ವಿಧಾನಸಭಾ ಉಪಚುನಾವಣೆಯ ಹಿನ್ನಲೆಯಲ್ಲಿ ಕಾಂಗ್ರೆಸ್ ಪಕ್ಷದ ಪ್ರಚಾರ ಚಟುವಟಿಕೆಗಳು ಜೋರಾಗಿ ನಡೆಯುತ್ತಿವೆ. ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಉಮೇಶ್ ಮೇಟಿ ಅವರ ಪರವಾಗಿ ಎಂ ಎಲ್ ಸಿ ಮತಯಾಚನೆ ನಡೆಸಿದರು.

ಉಪಮುಖ್ಯಮಂತ್ರಿ ಡಿ.ಕೆ ಶಿವುಕುಮಾರ ಅವರು ಬಾಗಲಕೋಟೆ ಪಟ್ಟಣಕ್ಕೆ ಭೇಟಿ ನೀಡಿದ ವೇಳೆ, ಹೆಲಿಪ್ಯಾಡ್‌ನಲ್ಲಿ ವಿಧಾನಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರ ಅವರು ಆತ್ಮೀಯವಾಗಿ ಸ್ವಾಗತಿಸಿದರು.

ನಂತರ ಕ್ಷೇತ್ರದ ವಿವಿಧ ಗ್ರಾಮಗಳು ಹಾಗೂ ಪಟ್ಟಣಗಳಲ್ಲಿ ನಡೆದ ಚುನಾವಣಾ ಪ್ರಚಾರದಲ್ಲಿ ಭಾಗವಹಿಸಿದ ಶರಣಗೌಡ ಪಾಟೀಲ್ ಬಯ್ಯಾಪೂರ ಅವರು ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರವಾಗಿ ಮತಯಾಚಿಸಿದರು. ಪ್ರಚಾರಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಈ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ಗೆಲುವು ಖಚಿತ ಎಂದರು.

ಈ ಪ್ರಚಾರ ಸಭೆಯಲ್ಲಿ ಜಿಲ್ಲಾಧ್ಯಕ್ಷ ನಂಜಯ್ಯ ಮಠ, ಸಿಂಧನೂರು ಶಾಸಕ ಹಂಪನಗೌಡ



ಪಾಟೀಲ್, ಶಾಸಕ ಜೆ.ಟಿ. ಪಾಟೀಲ್ ಸೇರಿದಂತೆ ಹಲವು ಸ್ಥಳೀಯ ಮುಖಂಡರು ಇದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಚುನಾವಣೆ 2026 ಹಿಮಂತ, ಮಮತಾ, ಸ್ಟಾಲಿನ್, ಪಿಣರಾಯಿ – ಯಾರಿಗೆ ಉಳಿಯಲಿದೆ ಅಧಿಕಾರ?

ಪಶ್ಚಿಮ ಬಂಗಾಳದಲ್ಲಿ ಬಂಗಾಳಿ ಸಾಂಸ್ಕೃತಿಕ ನೆಲೆಯ ಹೋರಾಟ, ತಮಿಳುನಾಡಿನಲ್ಲಿ ದ್ರಾವಿಡ ಅಸ್ಮಿತೆಯ ಭಾವ, ಅಸ್ಸಾಂನಲ್ಲಿ ಸ್ಥಳೀಯರು-ವಲಸಿಗರೆಂಬ ವಾದ, ಕೇರಳದಲ್ಲಿ ಬದಲಾವಣೆಯ ಬಯಕೆ. ಎಲ್ಲ ರಾಜ್ಯಗಳಲ್ಲೂ ಆಡಳಿತ ವಿರೋಧಿ ಅಲೆಯ ತೂಗುಗತ್ತಿ. ಗೆದ್ದು ಬೀಗುವವರಾರು? ಸೋತು ಸೊರಗುವವರಾರು?

2026ರ ಆರಂಭವು 4 ರಾಜ್ಯಗಳು ಮತ್ತು 1 ಕೇಂದ್ರಾಡಳಿತ ಪ್ರದೇಶಗಳ ಚುನಾವಣೆಗಳೊಂದಿಗೆ ರಾಷ್ಟ್ರ/ರಾಜ್ಯ ರಾಜಕೀಯವನ್ನು ಹೆಚ್ಚು ಸಕ್ರಿಯಗೊಳಿಸಿದೆ. ಅಸ್ಸಾಂ, ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ ಹಾಗೂ ಪುದುಚೇರಿಯಲ್ಲಿ ಏಪ್ರಿಲ್ 9, 23 ಹಾಗೂ 29ರಂದು ಮತದಾನ ನಡೆಯಲಿವೆ. ಮೇ 4ರಂದು ರಾಜ್ಯಗಳ ಭವಿಷ್ಯದ ಆಡಳಿತ ನಿರ್ಧರಿಸುವ ಫಲಿತಾಂಶವೂ ಪ್ರಕಟವಾಗಲಿದೆ. ಆಯಾ ರಾಜ್ಯಗಳಲ್ಲಿನ ಆಡಳಿತಾರೂಢ ಪಕ್ಷಗಳು ಮತ್ತೊಂದು ಅವಧಿಗೆ ಅಧಿಕಾರ ಉಳಿಸಿಕೊಳ್ಳಲು ಕಸರತ್ತು ನಡೆಸಿವೆ. ಪ್ರತಿಪಕ್ಷಗಳು ಆಡಳಿತ ಕಸಿದುಕೊಳ್ಳಲು ತವಕಿಸುತ್ತಿವೆ. ಹಾಲಿ ಮುಖ್ಯಮಂತ್ರಿಗಳು ಮತ್ತೊಂದು ಅವಧಿಗೆ ಮುಖ್ಯಮಂತ್ರಿ ಹುದ್ದೆಯಲ್ಲಿ ಮುಂದುವರೆಯಲು ಎದುರು ನೋಡುತ್ತಿದ್ದಾರೆ. ಆದರೆ, ಪ್ರತಿಯೊಂದು ರಾಜ್ಯಗಳಲ್ಲೂ ಅಧಿಕಾರ ಅವಧಿ, ಪ್ರಮುಖ ಸಾಧನೆಗಳು, ಜನರ ಒಲವು, ಆಂತರಿಕ ಸಮಸ್ಯೆಗಳು, ವಿರೋಧಿ ಶಕ್ತಿಗಳು ಹಾಗೂ ಪ್ರಸ್ತುತ ಪರಿಸ್ಥಿತಿಗಳು ವಿಭಿನ್ನವಾಗಿವೆ.

ಸದ್ಯ, ಚುನಾವಣೆ ನಡೆಯುತ್ತಿರುವ ಐದು ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಪೈಕಿ ಅಸ್ಸಾಂ ಮತ್ತು ಪುದುಚೇರಿಯಲ್ಲಿ ಬಿಜೆಪಿ ಅಧಿಕಾರದಲ್ಲಿದೆ. ಅಸ್ಸಾಂನಲ್ಲಿ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಸರ್ಕಾರವನ್ನು ಮುನ್ನಡೆಸುತ್ತಿದ್ದಾರೆ. ಆ ರಾಜ್ಯದಲ್ಲಿ ಏಪ್ರಿಲ್ 9ರಂದು ಮತದಾನ ನಡೆಯಲಿದೆ. ಚುನಾವಣೆಗೆ ದಿನಗಣನೆ ನಡೆಯುತ್ತಿರುವಾಗಲೇ, ಬಹುತೇಕ ಪ್ರಿ-ಪೋಲ್ ವಿಶ್ಲೇಷಣೆಗಳು, ಸಮೀಕ್ಷೆಗಳು ಚರ್ಚೆಯಲ್ಲಿವೆ. ಅಸ್ಸಾಂನಲ್ಲಿ ಚುನಾವಣಾ ವಾತಾವರಣವು ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟಕ್ಕೆ (+ +) ಅನುಕೂಲಕರವಾಗಿದೆ. ಹಿಮಂತ ಅವರು ಮತ್ತೊಮ್ಮೆ ಮುಖ್ಯಮಂತ್ರಿಯಾಗಬಹುದು ಎಂದು ಸಮೀಕ್ಷೆಗಳು ಹೇಳುತ್ತಿವೆ.

ಈ ಹಿಂದೆ ಕಾಂಗ್ರೆಸ್‌ನಲ್ಲಿದ್ದ ಹಿಮಂತ ಶರ್ಮಾ ಅವರು 2015ರಲ್ಲಿ, ಕಾಂಗ್ರೆಸ್‌ಗೆ ಕೈಕೊಟ್ಟು ಕಮಲದ ಕೈಹಿಡಿದು ಬಿಜೆಪಿ ಸೇರಿದರು. 2021ರ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿದ ಬಳಿಕ, ಅಸ್ಸಾಂ ಮುಖ್ಯಮಂತ್ರಿಯೂ ಆದರು. ಹಾಲಿ ಚುನಾವಣೆಯಲ್ಲಿ ಜಲುಕ್ಬಾರಿ ಕ್ಷೇತ್ರದಿಂದ ಕಣಕ್ಕಿಳಿದಿದ್ದಾರೆ. ಗೆಲುವು ಮತ್ತು ಮುಖ್ಯಮಂತ್ರಿ ಹುದ್ದೆಯ ಮುಂದುವರಿಕೆಗಾಗಿ ಹಂಬಲಿಸುತ್ತಿದ್ದಾರೆ.

ಅಸ್ಸಾಂನಲ್ಲಿ ಹಿಮಂತ ಶರ್ಮಾ ಅವರ ವ್ಯಕ್ತಿಗತ ಜನಪ್ರಿಯತೆ ಮತ್ತು ಅಕ್ರಮ ವಲಸೆ ವಿರೋಧಿ ನಿಲುವುಗಳು ಅವರಿಗೆ ಜನಬೆಂಬಲವನ್ನು ಉಳಿಸಿವೆ ಎಂದು ಕೆಲ ಸಮೀಕ್ಷೆಗಳು ಹೇಳುತ್ತಿವೆ. ಆದಾಗ್ಯೂ, ಕಾಂಗ್ರೆಸ್ ನಾಯಕ ಗೌರವ್ ಗೊಗೊಯ್ ನೇತೃತ್ವದಲ್ಲಿ ವಿರೋಧಪಕ್ಷಗಳು ಒಂದುಗೂಡುವ ಪ್ರಯತ್ನ ಮಾಡಿದ್ದವು. ಒಂದು ವೇಳೆ ಅದು ಸಾಧ್ಯವಾಗಿದ್ದರೆ, ಕೇಂದ್ರ ಬಿಜೆಪಿ ಸರ್ಕಾರ ಜಾರಿಗೆ ತಂದಿರುವ ಸಿಎಎ, ಭ್ರಷ್ಟಾಚಾರದ ಆರೋಪಗಳು, ಆಡಳಿತ ವಿರೋಧಿ ಅಲೆಯನ್ನು ಸಮರ್ಪಕವಾಗಿ ಬಳಸಿಕೊಂಡು, ಅಧಿಕಾರ ಬದಲಾವಣೆಯ ಸಾಧ್ಯತೆಗಳನ್ನು ಹೆಚ್ಚಿಸಬಹುದಿತ್ತು.

ಮುಸ್ಲಿಂ ಸಮುದಾಯದ ವಿರುದ್ಧ ಬಾಂಗ್ಲಾದೇಶಿ ಎಂಬ ಟೀಕೆ, ಮದ್ರಸಾ ಪರಿವರ್ತನೆ, ಬುಲ್ಡೋಜರ್ ಕ್ರಮಗಳನ್ನ ವಿರುದ್ಧ ವಿಪಕ್ಷಗಳು ಜನಾಭಿಪ್ರಾಯ ರೂಪಿಸಬಹುದಿತ್ತು. ಇನ್ನು, ಭೂಮಿ ಹೊಂದಿಕೆ, ಸಬ್ಸಿಡಿ ವಿವಾದ, ಸರದಾ ಹಗರಣ, ಭೂಮಿ ದುರ್ಬಳಕೆ (ಅದಾನಿ ಗ್ರೂಪ್‌ಗೆ ಪುಕ್ಕಟ್ಟೆ ಭೂಮಿ ನೀಡಿದ ಆರೋಪ) ರೀತಿಯ ಭ್ರಷ್ಟಾಚಾರ ಆರೋಪಗಳು ಕಾಂಗ್ರೆಸ್ ಮತ್ತು ಮಿತ್ರಪಕ್ಷಗಳಿಗೆ ಪ್ರಮುಖ ಅಸ್ತ್ರಗಳೂ ಆಗಿದ್ದವು. ಜೊತೆಗೆ, ಬೆಲೆ ಏರಿಕೆ, ನಿರುದ್ಯೋಗ, ಬಡತನ, ಪ್ರವಾಹ ನಿಯಂತ್ರಣದಲ್ಲಿ ಕೊರತೆಗಳು ಆಡಳಿತ ವಿರೋಧಿ ಅಲೆ ಸ್ಫೋಟಿಸುವಂತೆ ಮಾಡಲು ನೆರವಾಗುತ್ತಿದ್ದವು.

ಆದರೆ, ವಿಪಕ್ಷಗಳು ಒಗ್ಗೂಡದ ಕಾರಣ, ಅವುಗಳ ಸಂಘಟನಾ ದೌರ್ಬಲ್ಯವು ಬಿಜೆಪಿಗೆ ಅನುಕೂಲ ಮಾಡಿಕೊಟ್ಟಿದೆ. ಜೊತೆಗೆ, ನುಸುಳುಕೋರರನ್ನು ಹೊರಹಾಕುತ್ತೇವೆ ಮತ್ತು ಅಕ್ರಮ ವಲಸಿಗರ ವಿರುದ್ಧದ ಕ್ರಮ ಕೈಗೊಳ್ಳುತ್ತೇವೆ ಎಂಬ ಬಿಜೆಪಿಯ ಭಾರೀ ಪ್ರಚಾರವು ಅಸ್ಸಾಂ ಜನರಲ್ಲಿ ಬಿಜೆಪಿ ಕುರಿತು ಇನ್ನೂ ಒಲವನ್ನು ಉಳಿಸಿದೆ. ಮಾತ್ರವಲ್ಲದೆ, ಕಾಂಗ್ರೆಸ್‌ನ ಪ್ರಬಲ ನಾಯಕರನ್ನೂ ಬಿಜೆಪಿ ಹೊತ್ತೊಯ್ಯುತ್ತಿದೆ. ಇದೆಲ್ಲವೂ ಬಿಜೆಪಿ ಗೆಲುವು ಮತ್ತು ಶರ್ಮಾ ಮುಖ್ಯಮಂತ್ರಿಯಾಗಿ ಮುಂದುವರಿಯಲು ಅವಕಾಶ ಮಾಡಿಕೊಟ್ಟಿವೆ.

ಈಗಿನ ಪರಿಸ್ಥಿತಿಯಲ್ಲಿ, ಅಸ್ಸಾಂ ವಿಧಾನಸಭೆಯ ಒಟ್ಟು 126 ಸ್ಥಾನಗಳ ಪೈಕಿ ಬಿಜೆಪಿ ನೇತೃತ್ವದ ಎನ್‌ಡಿಎ 90-103 ಸೀಟುಗಳನ್ನು ಗೆಲ್ಲಲಿದ್ದು, ಅಧಿಕಾರ ಉಳಿಸಿಕೊಳ್ಳುವ ಸಾಧ್ಯತೆ ಇದೆ ಎಂದು ಸಮೀಕ್ಷೆಗಳು ಹೇಳುತ್ತಿವೆ.

ಬಂಗಾಳದಲ್ಲಿ ಕಳೆದ 15 ವರ್ಷಗಳಿಂದ ತೀವ್ರ ಪೈಪೋಟಿಯೇ ಇಲ್ಲದೆ ನಿರಾಯಾಸವಾಗಿ ಗೆದ್ದು, ಅಧಿಕಾರ ನಡೆಸಿದ್ದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತ್ತು ಅವರ ಟಿಎಂಸಿಗೆ ಈ ಬಾರಿ ಬಿಜೆಪಿ ಪ್ರಬಲ ಪೈಪೋಟಿ ಒಡ್ಡುತ್ತಿದೆ. ಹಾಲಿ ಚುನಾವಣೆಯು ಟಿಎಂಸಿ ಮತ್ತು ಬಿಜೆಪಿ ನಡುವಿನ ನೇರ ಮತ್ತು ತೀವ್ರ ಹಣಾಹಣಿಯ ಕಣವಾಗಿದೆ. ಪ್ರಾದೇಶಿಕತೆ ಮತ್ತು ಸಾಂಸ್ಕೃತಿಕ ಅಸ್ಮಿತೆಯನ್ನು ಚುನಾವಣಾ ಅಸ್ತ್ರವಾಗಿಸಿರುವ ಮಮತಾ, ಬಿಜೆಪಿಯನ್ನು ಹೊರಗಿನವರು ಮತ್ತು ಬಿಜೆಪಿ ನಾಯಕ ಸುವೇಂದು ಅಧಿಕಾರಿಯನ್ನು ದ್ರೋಹಿ ಎಂದು ದೂರುತ್ತಿದ್ದಾರೆ. ಬಿಜೆಪಿ ವಿರುದ್ಧ ಪ್ರಬಲ ಜನಭಿಪ್ರಾಯ ರೂಪಿಸುತ್ತಿದ್ದಾರೆ. ಮುಂದಿನ ಅವಧಿಗೂ ಮುಖ್ಯಮಂತ್ರಿಯಾಗಿ ಉಳಿಯುವ ವಿಶ್ವಾಸದಲ್ಲಿದ್ದಾರೆ.

2011ರಿಂದ ಮಮತಾ ಬ್ಯಾನರ್ಜಿ ಸತತ ಮೂರು ಅವಧಿಯ ಮುಖ್ಯಮಂತ್ರಿಯಾಗಿ ರಾಜ್ಯವನ್ನು ಮುನ್ನಡೆಸಿದ್ದಾರೆ. ಅವರ ಸರ್ಕಾರವು ಕೊಂಚ ಆಡಳಿತ ವಿರೋಧಿ ಅಲೆ ಎದುರಿಸುತ್ತಿದೆ. ಜೊತೆಗೆ, ಭ್ರಷ್ಟಾಚಾರ ಆರೋಪಗಳೂ ಹೇಳಿಬರುತ್ತಿವೆ. ಶಿಕ್ಷಕರ ನೇಮಕಾತಿ ಹಗರಣ, ಸಂದೇಶ್‌ಖಾಲಿ ಮತ್ತು ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಪ್ರಕರಣಗಳು ಜನರಲ್ಲಿ ಅಸಮಾಧಾನವನ್ನು ಹೆಚ್ಚಿಸಿವೆ. ಇವುಗಳ ಜೊತೆಗೆ, ಬಿಜೆಪಿ ತನ್ನ ಯಥಾಪ್ರಕಾರದಂತೆ ನುಸುಳುಕೋರರನ್ನು ಹೊರಹಾಕುತ್ತೇವೆಂದು ಚರ್ವಿತ ಚರ್ವಣದ ಪ್ರಚಾರ ಮಾಡುತ್ತಿದೆ. ಎಸ್‌ಐಆರ್ ಪ್ರಕ್ರಿಯೆಯು ಮತದಾರ ಪಟ್ಟಿಯಿಂದ ಭಾರೀ ಪ್ರಮಾಣದ ಮತದಾರರನ್ನು ಹೊರಹಾಕಿದೆ. ಇದೆಲ್ಲವೂ, ಟಿಎಂಸಿಗೆ ಕೊಂಚ ಸವಾಲನ್ನು ಹುಟ್ಟುಹಾಕಿದೆ. ಆದರೂ, ಈ ಚುನಾವಣೆಯಲ್ಲಿ ಟಿಎಂಸಿ ಕೆಲವು ಸೀಟುಗಳನ್ನು ಕಳೆದುಕೊಳ್ಳಬಹುದು. ಆದರೆ, ಅಧಿಕಾರ ಉಳಿಸಿಕೊಳ್ಳುತ್ತದೆ ಎಂದು ಚುನಾವಣಾ ಪೂರ್ವ ಸಮೀಕ್ಷೆಗಳು ವಿಶ್ಲೇಷಿಸಿವೆ.

ಮುಖ್ಯವಾಗಿ, ಮಮತಾ ಅವರು 2011ರಿಂದಲೂ ಬಂಗಾಳದಲ್ಲಿ ದೀರ್ಘಕಾಲದ ಆಡಳಿತ ನಡೆಸಿದ್ದರೂ, ಅವರು ಜನರೊಂದಿಗೆ ಗುರುತಿಸಿಕೊಂಡಿದ್ದಾರೆ. ಆಡಳಿತ ವಿರೋಧಿ ಅಲೆಗಿಂತ, ಜನ ಬೆಂಬಲವೇ ಪ್ರಧಾನವಾಗಿದೆ. ಅವರ ಆಡಳಿತದಲ್ಲಿ ಜಾರಿಯಾದ ಲಕ್ಷ್ಮೀರ್ ಭಂಡಾರ್, ಕನ್ಯಶ್ರೀ, ರೂಪಶ್ರೀ, ಸ್ವಸ್ಥ್ಯ ಸಾಥಿ, ಖಾದ್ಯ ಸಾಥಿ, ಜೈ ಬಾಂಗ್ಲಾ, ಯುವಶ್ರೀಯಂತಹ ಪ್ರಮುಖ ಯೋಜನೆಗಳು ಮಹಿಳೆಯರು, ಯುವಜನರು ಹಾಗೂ ಬಡವರನ್ನು ನೇರವಾಗಿ ತಲುಪಿವೆ. ಈ ಯೋಜನೆಗಳು ಜನರಲ್ಲಿ ಟಿಎಂಸಿ ಕುರಿತು ಒಲವನ್ನು ಹೆಚ್ಚಿಸಿವೆ.

ಜೊತೆಗೆ, ಮಮತಾ ಪರವಾಗಿ ಮುಸ್ಲಿಂ-ಮಹಿಳಾ () ಸಂಯೋಜನೆಯು ಬಲವಾಗಿದೆ. ಮಮತಾ ಅವರ ಬಂಗಾಳಿ ಗುರುತು, ಕೇಂದ್ರ ವಿರೋಧಿ ನಿಲುವುಗಳು ಜನರನ್ನು ಭಾವನಾತ್ಮಕವಾಗಿ ಸೆಳೆಯುತ್ತಿವೆ, ಮಾತ್ರವಲ್ಲದೆ, ಮಮತಾ ಕೇಂದ್ರ ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಟ ಮಾಡುವ ರೀತಿ, ಬೂತ್ ಮಟ್ಟದಲ್ಲಿ ಸಂಘಟನೆಗೆ ಕೊಡುತ್ತಿರುವ ಒತ್ತುಗಳು ಅವರನ್ನು ಬಂಗಾಳಿಗರು ಅಪ್ಪಿಕೊಳ್ಳುವಂತೆ ಮಾಡಿವೆ ಎಂದು ಸಮೀಕ್ಷೆಗಳು ವಿವರಿಸಿವೆ.

ಬಂಗಾಳದಲ್ಲಿ ಚುನಾವಣಾ ಪೂರ್ವ ಸಮೀಕ್ಷೆಗಳನ್ನು ನಡೆಸಿರುವ ವೋಟ್‌ವೈಬ್, ಸಿಎನ್‌ಎನ್ ನ್ಯೂಸ್18 ರೀತಿಯ ಸಮೀಕ್ಷೆಗಳು ಈ ಚುನಾವಣೆಯಲ್ಲಿ ಒಟ್ಟು 294 ಸ್ಥಾನಗಳ ಪೈಕಿ, ಟಿಎಂಸಿ 184-194 ಸೀಟುಗಳ ನಡುವೆ ಗೆಲ್ಲುವ ಸಾಧ್ಯತೆ ಇದೆ ಎಂದು ಹೇಳುತ್ತಿವೆ. ಬಿಜೆಪಿ ತನ್ನ ಸ್ಥಾನಗಳನ್ನು ಹೆಚ್ಚಿಸಿಕೊಳ್ಳಲಿದ್ದು, 98ರಿಂದ 123 ಕ್ಷೇತ್ರಗಳನ್ನು ಗೆಲ್ಲಬಹುದು. ಎಡಪಕ್ಷಗಳು ಮತ್ತು ಕಾಂಗ್ರೆಸ್‌ನ ಮೈತ್ರಿ ಮುರಿದಿರುವುದು ಟಿಎಂಸಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ವಿಶ್ಲೇಷಿಸಿವೆ. ಮಮತಾ 4ನೇ ಅವಧಿಗೆ ಮುಖ್ಯಮಂತ್ರಿಯಾಗುತ್ತಾರೆ ಎಂದು ಹೇಳುತ್ತಿವೆ.

ತಮಿಳುನಾಡಿನಲ್ಲಿ ಆಡಳಿತಾರೂಢ ಡಿಎಂಕೆ ದ್ರಾವಿಡ ಅಸ್ಮಿತೆಯೇ ತನ್ನ ಜೀವಾಳವೆಂದು ಸಾರುತ್ತಿದೆ. ಮುಖ್ಯಮಂತ್ರಿ ಎಂ.ಕೆ ಸ್ಟಾಲಿನ್ ನೇತೃತ್ವದ ಡಿಎಂಕೆ-ಕಾಂಗ್ರೆಸ್ ಮೈತ್ರಿಕೂಟವು ಕಲ್ಯಾಣ ಯೋಜನೆಗಳು ಮತ್ತು ದ್ರಾವಿಡ ಸಂಸ್ಕೃತಿಯ ಮೇಲೆ ಚುನಾವಣೆಯನ್ನು ಎದುರಿಸುತ್ತಿವೆ. ಮತ್ತೊಂದು ಪ್ರಾದೇಶಿಕ ಪಕ್ಷ ಎಐಎಡಿಎಂಕೆ ನೇತೃತ್ವದ ಬಿಜೆಪಿ ಒಳಗೊಂಡ ಎನ್‌ಡಿಎ ಪ್ರಬಲ ಪೈಪೋಟಿ ನೀಡುತ್ತಿರುವುದರ ಹೊರತಾಗಿಯೂ 2ನೇ ಅವಧಿಗೆ ಸ್ಟಾಲಿನ್ ಮುಖ್ಯಮಂತ್ರಿಯಾಗಲಿದ್ದಾರೆ ಎಂಬ ಅಭಿಪ್ರಾಯಗಳು ದಟ್ಟವಾಗಿವೆ.

ಡಿಎಂಕೆಯ ಐದು ವರ್ಷಗಳ ಆಡಳಿತದಲ್ಲಿ ಹಲವು ಡಿಎಂಕೆ ಶಾಸಕರು ಸ್ಥಳೀಯವಾಗಿ ಜನವಿರೋಧ ಎದುರಿಸುತ್ತಿದ್ದಾರೆ. ಹಲವು ಕ್ಷೇತ್ರಗಳಲ್ಲಿ ಹಾಲಿ ಶಾಸಕರನ್ನು ಬದಲಿಸಲು ಮತದಾರರು ಬಯಸಿದ್ದಾರೆ. ಅದರಂತೆ, ಕೆಲ ಶಾಸಕರಿಗೆ ಡಿಎಂಕೆ ಕೂಡ ಕೋಕ್ ಕೊಟ್ಟಿದೆ. ಹೊಸಬರಿಗೆ ಮಣೆ ಹಾಕಿದೆ. ಆದಾಗ್ಯೂ, ಗ್ಯಾಸ್ ಹಗರಣಗಳು, ಕಾನೂನು-ಸುವ್ಯವಸ್ಥೆ ಕುಸಿತ, ಮಹಿಳೆಯರ ವಿರುದ್ಧ ಅಪರಾಧ ಏರಿಕೆ, ರಾಜ್ಯ ಸಾಲದಲ್ಲಿ ಹೆಚ್ಚಳದಂತಹ ಆರೋಪಗಳು ಹಾಗೂ ಬೆಲೆ ಏರಿಕೆ ಮತ್ತು ನಿರುದ್ಯೋಗದಂತಹ ಸಮಸ್ಯೆಗಳು ಆಡಳಿತ ವಿರೋಧಿ ಅಲೆಯನ್ನು ಹುಟ್ಟು ಹಾಕಿದೆ.

ಜೊತೆಗೆ, ಪಕ್ಷದಲ್ಲಿ ಉದಯನಿಧಿ ಸ್ಟಾಲಿನ್ ಅವರ ಪದನ್ನೋನ್ನತಿಯನ್ನು ಕುಟುಂಬ ರಾಜಕಾರಣವೆಂದು ಬಿಜೆಪಿ ಪ್ರಚಾರ ಮಾಡುತ್ತಿದೆ. ಕಳೆದ ವರ್ಷ ನಟ ವಿಜಯ್ ಹುಟ್ಟುಹಾಕಿದ ಟಿವಿಕೆ ಪಕ್ಷವು ಡಿಎಂಕೆಗೆ ಹೊಸ ತಲೆನೋವಾಗಿಯೂ ಪರಿಣಮಿಸಿದೆ. ಡಿಎಂಕೆ ಮತ್ತು ಕಾಂಗ್ರೆಸ್‌ನ ಮತಗಳನ್ನು ಟಿವಿಕೆ ವಿಭಜಿಸುವ ಅಪಾಯವೂ ಇದೆ.

ಇದೆಲ್ಲದರ ನಡುವೆಯೂ, ಸ್ಟಾಲಿನ್ ಅವರ ದ್ರಾವಿಡಿಯನ್ ಮಾಡೆಲ್ 2.0 ಎಂಬ ಅಭಿವೃದ್ಧಿ ಮತ್ತು ಕಲ್ಯಾಣ ಕಾರ್ಯಕ್ರಮಗಳು ಜನರನ್ನು ತಲುಪಿವೆ. ಅವರ ಸರ್ಕಾರದ ಕಲೈಜ್ಞರ್ ಮಗಳೀರ್ ಉರಿಮೈ ತೊಗೈ (ಕರ್ನಾಟಕದ ಗೃಹಲಕ್ಷ್ಮಿ), ಮಹಿಳೆಯರಿಗೆ ನಗರಗಳಲ್ಲಿ ಉಚಿತ ಬಸ್ ಪ್ರಯಾಣ, ವಿದ್ಯಾರ್ಥಿಗಳಿಗೆ ಉಪಹಾರ ಯೋಜನೆ, ಪುತುಮೈ ಪೆಣ್ / ತಮಿಳ್ ಪುದಲ್ವನ್ ಯೋಜನೆಯಡಿ ಶಿಕ್ಷಣಕ್ಕೆ ಒತ್ತು, ವೃದ್ಧಾಪ್ಯ ಪಿಂಚಣಿ ಹೆಚ್ಚಳ, ಆರೋಗ್ಯ ವಿಮೆ ವ್ಯಾಪ್ತಿ ಹೆಚ್ಚಳ ರೀತಿಯ ಕ್ರಮಗಳು ರಾಜ್ಯದಲ್ಲಿ ಸ್ಟಾಲಿನ್ ಮೇಲಿನ ಒಲವನ್ನೂ ಹೆಚ್ಚಸಿದೆ.

ಜೊತೆಗೆ, ಅಭಿವೃದ್ಧಿ ಯೋಜನೆಗಳು, ಆರ್ಥಿಕ ಬೆಳವಣಿಗೆ, ಎಲೆಕ್ಟ್ರಾನಿಕ್ಸ್ ರಫ್ತು, ಪ್ಲಾಂಟ್‌ಗಳ ವಿಸ್ತರಣೆ, ಆಟೋಮೊಬೈಲ್, ತಯಾರಿಕಾ ಕ್ಷೇತ್ರದಲ್ಲಿ ಪ್ರಗತಿ, ಕೃಷಿಗೆ ಉತ್ತೇಜನವು ಸರ್ಕಾರದ ಕೆಲಸಗಳನ್ನು ಎತ್ತಿ ತೋರಿಸಿದೆ. ಮಾತ್ರಲ್ಲದೆ, ದೇವಾಲಯ ಪೂಜಾರಿ ನೇಮಕಾತಿಯಲ್ಲಿ ಸಾಮಾಜಿಕ ನ್ಯಾಯ, ವಿರೋಧ, ಗವರ್ನರ್ ವಿರುದ್ಧದ ಹೋರಾಟ, ಕೇಂದ್ರ ಸರ್ಕಾರದ ವಿರುದ್ಧದ ಪ್ರತಿಭಟನೆಗಳು ಜನರ ದ್ರಾವಿಡ ಭಾವನೆಯು ಡಿಎಂಕೆ ಪರವಾದ ಅಲೆಯನ್ನು ಸೃಷ್ಟಿಸಿದೆ.

ರಾಜ್ಯದಲ್ಲಿ ಸೈಬರ್ ವಂಚನೆ ಹೆಚ್ಚಳ : ಸಿಎಂ ಸಿದ್ದರಾಮಯ್ಯ ಆತಂಕ

ಬೆಂಗಳೂರು,ಏ.2- ಸೈಬರ್ ಮತ್ತು ಮಾದಕ ದ್ರವ್ಯಕ್ಕೆ ಸಂಬಂಧಿಸಿದ ಅಪರಾಧ ಪ್ರಕರಣಗಳು ರಾಷ್ಟ್ರೀಯ ಸರಾಸರಿಗಿಂತ ರಾಜ್ಯದಲ್ಲಿ ಹೆಚ್ಚಾಗಿದ್ದು ಇವುಗಳನ್ನು ಕಟ್ಟುನಿಟ್ಟಾಗಿ ತಡೆಗಟ್ಟಲು ಮುಖ್ಯ ಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ.

ಕರ್ನಾಟಕ ರಾಜ್ಯ ಪೊಲೀಸ್ ವತಿಯಿಂದ ಕೋರಮಂಗಲದ ಪರೇಡ್ ಮೈದಾನದಲ್ಲಿ ಆಯೋಜಿಸಿದ್ದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ 158 ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಮುಖ್ಯಮಂತ್ರಿಗಳ ಪದಕ ಪ್ರದಾನ ಮಾಡಿ ಅವರು ಮಾತನಾಡಿದರು.

ಯಾವುದೇ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಆಯಾ ಠಾಣಾಧಿಕಾರಿಯ ಗಮನಕ್ಕೆ ಬರದಂತೆ ಯಾವುದೇ ಅಪರಾಧಗಳು, ಕೆಟ್ಟ ವ್ಯವಹಾರಗಳು ನಡೆಯಲು ಸಾಧ್ಯವಿಲ್ಲ ಎನ್ನುವುದು ನನ್ನ ನಂಬಿಕೆ. ಆಯಾ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್‌ಗಳು ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ಅನೇಕ ಅಪರಾಧಗಳನ್ನು ತಡೆಗಟ್ಟಬಹುದು ಎಂದರು.

ಹಲವು ಬಾರಿ ಸೂಚನೆ ನೀಡಿದ್ದರೂ ಆಯಾ ಠಾಣೆ ವ್ಯಾಪ್ತಿಯಲ್ಲಿ ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಪ್ರಯತ್ನಿಸದಿದ್ದರೆ ಪೊಲೀಸ್ ಇನ್‌ಸ್ಪೆಕ್ಟರ್ ಅವರನ್ನು ಜವಾಬ್ದಾರರನ್ನಾಗಿ ಮಾಡಬೇಕು. ಅಂಥವರ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ತಂತ್ರಜ್ಞಾನ ಬಳಸಿ ಅಪರಾಧ ಪ್ರಕರಣಗಳನ್ನು ಕಡಿಮೆ ಮಾಡಬೇಕು. ತಂತ್ರಜ್ಞಾನ ಬಳಕೆಯಲ್ಲಿ ಇಲಾಖೆ ಹಿಂದುಳಿದಿರುವ



ಮಾಹಿತಿ ಇದೆ ಎಂದು ಹೇಳಿದರು. ಸೈಬರ್ ಅಪರಾಧಗಳು, ಮಾದಕದ್ರವ್ಯ ಅಪರಾಧಗಳು ಕಡಿಮೆ ಮಾಡಬೇಕು. ಯುವಕರು ಜೀವನ ಹಾಳು ಮಾಡಿಕೊಳ್ಳುವುದನ್ನು ತಪ್ಪಿಸಲು ಮಾದಕದ್ರವ್ಯ ಬಳಕೆಯನ್ನು ತಪ್ಪಿಸಬೇಕು. ಮಾದಕದ್ರವ್ಯ ಅಪರಾಧಗಳ ತಡೆಗೆ ಎರಡು ವಿಶೇಷ ಕಾರ್ಯಾಚರಣೆಗಳನ್ನು ರಚನೆ ಮಾಡಲಾಗಿದೆ. ರಾಜ್ಯವನ್ನು ಮಾದಕದ್ರವ್ಯ ವ್ಯಸನಮುಕ್ತ ಮಾಡಲು ಉದ್ದೇಶಿಸಿದ್ದು, ಇದು ಪೊಲೀಸ್ ಇಲಾಖೆಯ ಗುರಿಯೂ ಆಗಬೇಕಿದೆ ಎಂದರು.

ಹಲವು ರೀತಿಯ ಅಪರಾಧ ಪ್ರಕರಣಗಳನ್ನು ನಿಯಂತ್ರಿಸಿ ಶಿಕ್ಷೆ ಪ್ರಮಾಣದಲ್ಲಿ ಕರ್ನಾಟಕ ರಾಜ್ಯ ಮುಂದಿದೆ. ಇದಕ್ಕಾಗಿ ಪೊಲೀಸ್ ಇಲಾಖೆಯನ್ನು ಅಭಿನಂದಿಸುವ ಜೊತೆಗೆ ಪ್ರಮಾಣ ಹೆಚ್ಚಾಗಿರುವ ಅಪರಾಧಗಳ ನಿಯಂತ್ರಣದಲ್ಲೂ ನಾವು ಶ್ರಮ ಹಾಕಬೇಕಿದೆ ಎಂದು ಸೂಚಿಸಿದರು. ಸಮಯದ ಮಿತಿ ಇಲ್ಲದಂತೆ ದಿನದ 24 ಗಂಟೆಯೂ ಕರ್ತವ್ಯಪ್ರಜ್ಞೆ ಇಟ್ಟುಕೊಂಡು ಪೊಲೀಸರು ಕೆಲಸ ಮಾಡುವುದರಿಂದ ಸಮಾಜದಲ್ಲಿ ನೆಮದಿ ಮತ್ತು ಸೌಹಾರ್ದತೆ ನೆಲೆಸಿದೆ.

ಮಹಿಳೆಯರು, ಮಕ್ಕಳು ಮತ್ತು ದುರ್ಬಲರು ಹಾಗೂ ಅಸಹಾಯಕರ ರಕ್ಷಣೆ ನಮ ಸರ್ಕಾರದ ಮೊದಲ ಆದ್ಯತೆ. ಪೊಲೀಸರೂ ಇದನ್ನು ಗಮನದಲ್ಲಿಟ್ಟುಕೊಂಡು ಕೆಲಸ ಮಾಡಬೇಕು ಎಂದರು. ರಾಜ್ಯದ ಆರ್ಥಿಕ ಬೆಳವಣಿಗೆಗೂ, ಜಿಡಿಪಿ ಪ್ರಗತಿಗೂ ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆಗೂ ನೇರನೇರಾ ಸಂಬಂಧ ಇರುತ್ತದೆ. ಇದನ್ನು ಗಮನದಲ್ಲಿ ಇಟ್ಟುಕೊಂಡು ಪೊಲೀಸ್ ಇಲಾಖೆ ಕಾರ್ಯನಿರ್ವಹಿಸಿದರೆ ಆರ್ಥಿಕತೆಗೂ ದೊಡ್ಡ ಕೊಡುಗೆ ಕೊಟ್ಟಂತಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಪದಕ ವಿಜೇತರೆಲ್ಲರಿಗೂ ಶುಭಾಶಯ ಕೋರಿದ ಮುಖ್ಯಮಂತ್ರಿಗಳು, ಇವರ ಕಾರ್ಯ ಮತ್ತು ವೃತ್ತಿಪರತೆ ಇತರರಿಗೂ ಸ್ಫೂರ್ತಿಯಾಗಲಿ ಎಂದು ಸಿದ್ದರಾಮಯ್ಯ ಹಾರೈಸಿದರು. ಗೃಹ ಸಚಿವ ಡಾ.ಜಿ.ಪರಮೇಶ್ವರ್, ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ.ಸಲೀಂ ಸೇರಿದಂತೆ ಹಿರಿಯ-ಕಿರಿಯ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

ಟ್ರಂಪ್ ಭಾಷಣದ ಬೆನ್ನಲ್ಲೇ ಇಸ್ರೇಲ್, ಗಲ್ಫ್ ದೇಶಗಳ ಮೇಲೆ ಮತ್ತೆ ಕ್ಷಿಪಣಿ ದಾಳಿ ನಡೆಸಿದ ಇರಾನ್

ದುಬೈ (ಯುಎಇ),ಏ.02-

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾಷಣದ ಬೆನ್ನಲ್ಲೇ ಇರಾನ್, ಇಸ್ರೇಲ್ ಮತ್ತು ಗಲ್ಫ್ ದೇಶಗಳ ಮೇಲೆ ಹೊಸ ಕ್ಷಿಪಣಿ ದಾಳಿ ಮೂಲಕ ಪ್ರತಿಕ್ರಿಯಿಸಿದೆ. ವಾಷಿಂಗ್ಟನ್‌ನ ಕದನ ವಿರಾಮನವನ್ನು ಟೆಹ್ರಾನ್ ತಿರಸ್ಕರಿಸಿದೆ. ಜೊತೆಗೆ ಹಾರ್ಮುಜ್ ಜಲಸಂಧಿಯ ಮೇಲೆ ಹಿಡಿತವನ್ನು ಮುಂದುವರೆಸಿದ್ದಾಗಿ ತಿಳಿಸಿದೆ.

ಟ್ರಂಪ್ ಅವರು ಮುಂದಿನ ಎರಡು ಮೂರು ವಾರಗಳಲ್ಲಿ ಅಮೆರಿಕವು ಇರಾನ್ ಮೇಲೆ ಕಠಿಣ ದಾಳಿ ನಡೆಸುವುದಾಗಿ ಭಾಷಣ ಪ್ರಾರಂಭಿಸುವ ಸ್ವಲ್ಪ ಮೊದಲು, ದುಬೈನಲ್ಲಿ ಸ್ಫೋಟಗಳ ಶಬ್ದ ಕೇಳಿಬಂದವು. ಅಧ್ಯಕ್ಷರು ಭಾಷಣ ಮಾಡಿದ ಬೆನ್ನಲ್ಲೇ ಇಸ್ರೇಲ್ ತನ್ನ ಮಿಲಿಟರಿ ಒಳಬರುವ ಕ್ಷಿಪಣಿಗಳನ್ನು ತಡೆಯಲು ಮುಂದಾಯಿತು. ಜೊತೆಗೆ ಬಹ್ರೇನ್‌ನಲ್ಲಿರುವ ಅಮೆರಿಕ 5ನೇ ನೌಕಾಪಡೆಯ ನೆಲೆಯಲ್ಲಿ ಸೈರನ್‌ಗಳು ಮೊಳಗಿದವು.

ಜಲಸಂಧಿಯನ್ನು ಮುಕ್ತವಾಗಿಸುವಂತೆ ವಾಷಿಂಗ್ಟನ್ ಒತ್ತಾಯಿಸಿದರೂ, ಟ್ರಂಪ್ ಇದು ಅಮೆರಿಕ ಪಡೆಗಳ ನಿಯಂತ್ರಣದಲ್ಲಿಲ್ಲ. ಈ ಮಾರ್ಗದ ಮೂಲಕ ತೈಲ ಪಡೆಯುತ್ತಿರುವ ದೇಶಗಳು ಮುಂದಾಗಿರುವ ಈ ಕುರಿತು ಮಾತನಾಡಬೇಕು ಎಂದಿದ್ದರು.

ಹಾರ್ಮುಜ್ ಜಲಸಂಧಿಯಲ್ಲಿ ತೈಲ ಹಡುಗುಗಳ ಸಂಚಾರ ಮುಕ್ತವಾಗಿಸಿ, ಮಾರ್ಗವನ್ನು ತೆರೆಯುವ ಕುರಿತು ಬ್ರಿಟನ್ ಸುಮಾರು 35ಕ್ಕೂ ಹೆಚ್ಚು ದೇಶಗಳೊಂದಿಗೆ ಮಾತುಕತೆ ನಡೆಸಲು ಯೋಜಿಸಿದೆ.

ಅಮೆರಿಕ ಹೊರತುಪಡಿಸಿ 35 ದೇಶಗಳು ಹಾಗೂ ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ಬಹ್ರೇನ್, ಇರಾನ್ ಜಲಸಂಧಿಯನ್ನು ನಿರ್ಬಂಧಿಸುವುದನ್ನು ನಿಲ್ಲಿಸುವಂತೆ ಒತ್ತಾಯಿಸುವ ಘೋಷಣೆಗೆ ಸಹಿ ಹಾಕಿದವು. ಯುದ್ಧ ಅಂತ್ಯಗೊಂಡ ಬಳಿಕ ರಾಜತಾಂತ್ರಿಕ ಮತ್ತು ರಾಜಕೀಯ ಕ್ರಮದ ಮೂಲಕ ಹಡಗು ಸಂಚಾರವನ್ನು ಪುನರ್ ಸ್ಥಾಪನೆ ಕುರಿತು ಚರ್ಚಿಸಲಾಯಿತು.

ಇದೀಗ ಸಹಿ ಹಾಕಿದ 35 ದೇಶಗಳು, ಡ್ರೋನ್ ಮತ್ತು ಕ್ಷಿಪಣಿ ದಾಳಿಗಳ ಬೆದರಿಕೆ ಮತ್ತು ಜಲಸಂಧಿಯನ್ನು ನಿರ್ಬಂಧಿಸುವ ಇತರ ಪ್ರಯತ್ನಗಳನ್ನು ತಕ್ಷಣ ನಿಲ್ಲಿಸುವಂತೆ ಕರೆ ನೀಡಿದೆ.

ಈ ವೇಳೆ ಮಾತನಾಡಿರುವ ಬ್ರಿಟಿಷ್ ಪ್ರಧಾನಿ ಕೀರ್ ಸ್ಟಾರ್ಮ್ರ, ಜಲಸಂಧಿಯಲ್ಲಿ ಸಂಚಾರ



ಸ್ವಾತಂತ್ರ್ಯವನ್ನು ಪುನಃಸ್ಥಾಪಿಸಲು, ಸಿಕ್ಕಿಬಿದ್ದ ಹಡಗುಗಳು ಮತ್ತು ನಾವಿಕರ ಸುರಕ್ಷತೆಯನ್ನು ಖಾತರಿಪಡಿಸಲು ಮತ್ತು ಪ್ರಮುಖ ಸರಕುಗಳ ಚಲನೆಯನ್ನು ಪುನರಾರಂಭಿಸಲು ತೆಗೆದುಕೊಳ್ಳಬಹುದಾದ ಎಲ್ಲ ಕಾರ್ಯಸಾಧ್ಯವಾದ ರಾಜತಾಂತ್ರಿಕ ಮತ್ತು ರಾಜಕೀಯ ಕ್ರಮಗಳನ್ನು ಈ ಗುಂಪು ನಿರ್ಣಯಿಸುತ್ತದೆ ಎಂದಿದ್ದಾರೆ.

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಅಧ್ಯಕ್ಷತೆಯನ್ನು ಇದೀಗ ಹೊಂದಿರುವ ಬಹ್ರೇನ್, ಬಿಕ್ಕಟ್ಟನ್ನು ಪರಿಹರಿಸಲು ವಿಶ್ವ ಸಂಸ್ಥೆಯನ್ನು ಒತ್ತಾಯಿಸಲು ಕೆಲಸ ಮಾಡುತ್ತಿದೆ. ಇರಾನ್ ಜಲಸಂಧಿಯ ಮೂಲಕ ಹಡಗುಗಳ ಹರಿವನ್ನು ಅನುಮತಿಸಿದ್ದರೂ, ಅದು ಮುಚ್ಚಿದೆ. ಇರಾನ್, ಗಲ್ಫ್ ಅರಬ್ ಇಂಧನ ಮೂಲಸೌಕರ್ಯದ ಮೇಲೆ ಪದೇ ಪದೇ ದಾಳಿ ಮಾಡುತ್ತಿದೆ. ಪರಿಣಾಮ ತೈಲ ಬೆಲೆಗಳು ಗಗನಕ್ಕೇರಿವೆ. ವಿಶ್ವಾದ್ಯಂತ ವ್ಯಾಪಕ ಆರ್ಥಿಕ ಸಮಸ್ಯೆಗಳಿಗೆ ಕಾರಣವಾಗಿದೆ.

ಜಿಲ್ಲಾಡಳಿತದಿಂದ ಮಕ್ಕಳಿಗಾಗಿ ಬೇಸಿಗೆ ತರಬೇತಿ ಶಿಬಿರ ಆಯೋಜನೆ

ರಾಯಚೂರು,ಏ.02

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಬೇಸಿಗೆ ತರಬೇತಿ ಶಿಬಿರ-2026ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಮಕ್ಕಳ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

ಶಾಲೆಗಳು 02 ತಿಂಗಳು ರಜೆ ಹಿನ್ನಲೆಯಲ್ಲಿ ಮಕ್ಕಳಿಗೆ ಹೊಸ ಹವ್ಯಾಸ ಅಥವಾ ಕ್ರೀಡೆಯಲ್ಲಿ ಅವರು ಭಾಗವಹಿಸುವಂತೆ ಮಾಡಲು ಸೂಕ್ತ ಸಮಯ ಇದಾಗಿದೆ. 02 ತಿಂಗಳ ರಜೆಯಲ್ಲಿ ಮೊಬೈಲ್, ಮೋಜು-ಮಸ್ತಿ ಎನ್ನುವ ಬದಲು ಜೀವನ ಕೌಶಲ್ಯವಾದಂತಹ ಈಜು ಅಥವಾ ಮಕ್ಕಳಿಗೆ ದುಶ್ಚಟ/ಮೊಬೈಲ್‌ಗಳಿಂದ ಮಕ್ಕಳನ್ನು ಶಾರೀರಿಕ ಹಾಗೂ ಮಾನಸಿಕ ಆರೋಗ್ಯ ಹೆಚ್ಚಿಸಲು ಕ್ರೀಡೆಗಳಲ್ಲಿ ಅವರನ್ನು ತೊಡಗುವಂತೆ ಮಾಡುವುದು ಏಕೈಕ ಉಪಾಯವಾಗಿದೆ. ಈ ನಿಟ್ಟಿನಲ್ಲಿ ಕ್ರೀಡಾ ಇಲಾಖೆ ವತಿಯಿಂದ 6 ವರ್ಷ ಮೇಲ್ಪಟ್ಟು ಹಾಗೂ 16 ವರ್ಷದೊಳಗಿನ ಬಾಲಕ/ಬಾಲಕೀಯರಿಗೆ ಬೆಳಿಗ್ಗೆ ಹಾಗೂ ಸಾಯಾಂಕಾಲ ಕನಿಷ್ಠ ಫೀ-ನಲ್ಲಿ ವಿವಿಧ ರೀತಿಯ ಕ್ರೀಡೆಗಳಾದ ಶೆಟಲ್ ಬ್ಯಾಡ್ಮಿಂಟನ್ ಕ್ರೀಡೆ ತಬೇತುದಾರರಾದ ರಾಮಲಿಂಗಪ್ಪ ಮೊಬೈಲ್ ಸಂಖ್ಯೆ: 8971737656, ಟೇಬಲ್ ಟೆನ್ನಿಸ್ ಕ್ರೀಡೆ ತಬೇತುದಾರರಾದ ಎಮ್.ಎನ್ ಈರಣ್ಣ ಮೊಬೈಲ್ ಸಂಖ್ಯೆ: 9448837766, ಈಜು ಕ್ರೀಡೆ ತಬೇತುದಾರರಾದ ಇಬ್ರಾಹಿಮ್ ಮೊಬೈಲ್ ಸಂಖ್ಯೆ: 9739875798, ಬಾಸ್ಕೆಟ್‌ಬಾಲ್ ಕ್ರೀಡೆ ತಬೇತುದಾರರಾದ ದೇವಪ್ಪ ಮೊಬೈಲ್ ಸಂಖ್ಯೆ: 9739686843, ವಾಲಿಬಾಲ್, ಥ್ರೋ-ಬಾಲ್ ಕ್ರೀಡೆ ತಬೇತುದಾರರಾದ ವೆಂಕಟೇಶ್ ಮೊಬೈಲ್ ಸಂಖ್ಯೆ: 8310222353, ಕರಾಟೆ ತಬೇತುದಾರರಾದ ಅನಿರುದ್ಧ ಮೊಬೈಲ್ ಸಂಖ್ಯೆ: 8971117995ಗೆ ಸಂಪರ್ಕ ಮಾಡಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಕಚೇರಿಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದರಪಟ್ಟಿ ಸಲ್ಲಿಸಲು ಅರ್ಜಿ ಆಹ್ವಾನ

ರಾಯಚೂರು ಏಪ್ರಿಲ್ 02

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ನಿರ್ದೇಶಕರ ಕಚೇರಿಯಲ್ಲಿ 2024-25ನೇ ಸಾಲಿನ ಹಾಗೂ 2025ರ ಏಪ್ರಿಲ್ ಮಾಹೆಯ ಕನ್ನಡ ಮತ್ತು ಇಂಗ್ಲಿಷ್ ದಿನಪತ್ರಿಕೆಗಳನ್ನು ವಿಲೇವಾರಿ ಮಾಡಲು ಆಸಕ್ತರಿಂದ ದರಪಟ್ಟಿ ಸಲ್ಲಿಸಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ತಮ್ಮ ದರಪಟ್ಟಿಗಳನ್ನು ಸಾರ್ವಜನಿಕ ರಜೆ ದಿನಗಳನ್ನು ಹೊರತುಪಡಿಸಿ, ಏಪ್ರಿಲ್ 10ರೊಳಗಾಗಿ ಕಚೇರಿಯ ವೇಳೆಯಲ್ಲಿ ನೇರವಾಗಿ ಸಲ್ಲಿಸಬಹುದಾಗಿದೆ. ನಿಗದಿತ ಅವಧಿಯ ನಂತರ ಬರುವ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾಡಳಿತದಿಂದ ಏಪ್ರಿಲ್ 5ರಂದು ಡಾ.ಬಾಬು ಜಗಜೀವನ ರಾಮ್ ಅವರ 119ನೇ ಜನ್ಮ ದಿನಾಚರಣೆ

ರಾಯಚೂರು ಏಪ್ರಿಲ್ 02 (ಕರ್ನಾಟಕ ವಾರ್ತೆ): ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರ ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಭಾರತ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ 119ನೇ ಜನ್ಮ ದಿನಾಚರಣೆಯನ್ನು ಏಪ್ರಿಲ್ 5ರ ಬೆಳಿಗ್ಗೆ 11.30ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.

ಸಣ್ಣನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್,ಕೆ.ಕೆ.ಆರ್.ಡಿ.ಬಿ ಕಾರ್ಯದರ್ಶಿಗಳಾದ ನಳೀನ್ ಅತುಲ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಭಾಗಿಯಾಗಲಿದ್ದಾರೆ.

ಉಪನ್ಯಾಸಕರಾಗಿ ಮಾನ್ವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕರಾದ ಡಾ.ಬಸವರಾಜ ಕರಡಿಗುಡ್ಡ ಅವರು ಡಾ.ಬಾಬು ಜಗಜೀವನ ರಾಮ್ ಅವರ ಕುರಿತು ಉಪನ್ಯಾಸ ಮಾಡಲಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR